**ಕರ್ನಾಟಕ ಸರ್ಕಾರ**
**ಅರಣ್ಯ ಇಲಾಖೆ**
**ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಅರಣ್ಯ ಪಡೆ ಮುಖ್ಯಸ್ಥರು) ಹಾಗೂ ಆಯ್ಕೆ ಪ್ರಾಧಿಕಾರ ರವರ ಕಛೇರಿ, ಅರಣ್ಯ ಭವನ, 18ನೇ ಅಡ್ಡ ರಸ್ತೆ, ಮಲ್ಲೇಶ್ವರಂ, ಬೆಂಗಳೂರು-03.**

# ಅಧಿಸೂಚನೆ

**ಸಂಖ್ಯೆ: ಬಿ9/ನೇಮಕಾತಿ/ವಿವ-06/2021-22 ದಿನಾಂಕ: 15.10.2022**

## 2022-23 ನೇ ಸಾಲಿನಲ್ಲಿ ಕಲ್ಯಾಣ ಕರ್ನಾಟಕ ಪ್ರದೇಶಕ್ಕೆ ಮೀಸಲಿಟ್ಟ ವಲಯ ಅರಣ್ಯಾಧಿಕಾರಿ ವೃಂದದ ನೇರ ನೇಮಕಾತಿ – ಒಟ್ಟು 10 ಹುದ್ದೆಗಳು

ಕರ್ನಾಟಕ ನಾಗರೀಕ ಸೇವಾ (ನೇರ ನೇಮಕಾತಿ)(ಸಾಮಾನ್ಯ) ನಿಯಮಾವಳಿಗಳು 2021 ರನ್ವಯ ಹಾಗೂ ಸರ್ಕಾರದ ಅಧಿಸೂಚನೆ ಸಂಖ್ಯೆ: FEE 72 FEG 2017 ದಿನಾಂಕ: 28.02.2022ರ ಕರ್ನಾಟಕ ಅರಣ್ಯ ಇಲಾಖಾ ಸೇವೆಗಳು (ನೇಮಕಾತಿ) (ತಿದ್ದುಪಡಿ) ನಿಯಮಾವಳಿ, 2018 ಮತ್ತು ಕರ್ನಾಟಕ ಸಾರ್ವಜನಿಕ ಉದ್ಯೋಗ (ಹೈದರಾಬಾದ್ – ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) ನಿಯಮಾವಳಿ, 2013ರಂತೆ ಅರಣ್ಯ ಇಲಾಖೆಯಲ್ಲಿ ಕಲ್ಯಾಣ ಕರ್ನಾಟಕ ಪ್ರದೇಶದಲ್ಲಿ ಖಾಲಿ ಇರುವ **10** ವಲಯ ಅರಣ್ಯಾಧಿಕಾರಿ ಹುದ್ದೆಗಳಿಗೆ ಕರ್ನಾಟಕ ಸಾರ್ವಜನಿಕ ಉದ್ಯೋಗ (ಹೈದರಾಬಾದ್ – ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) ಆದೇಶ 2013ರ ಕಂಡಿಕೆ 2(1)(ಎಫ್) ಅರ್ಥವಿವರಣೆಯ ಅಡಿಯಲ್ಲಿ ವರ್ಗೀಕರಿಸಲು ಅರ್ಹವಿರುವ ಅಭ್ಯರ್ಥಿಗಳಿಂದ ಸ್ಪರ್ಧಾತ್ಮಕ ಪರೀಕ್ಷೆಗಳ ಮೂಲಕ ಆಯ್ಕೆ ಮಾಡಲು ಬಿ.ಎಸ್ಸಿ. (ಅರಣ್ಯ ಶಾಸ್ತ್ರ)/ಬಿ.ಎಸ್ಸಿ.(ವಿಜ್ಞಾನ)/ ನಿಗದಿತ ಇಂಜಿನಿಯರಿಂಗ್ ಪದವೀಧರರಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

## 1. ಅರ್ಜಿ ಸಲ್ಲಿಸುವ ವಿಧಾನ:

1.1. ಈ ನೇಮಕಾತಿಗೆ ಸಂಬಂಧಿಸಿದ ಅಧಿಸೂಚನೆ, ಪಠ್ಯಕ್ರಮ (Syllabus), ಅರ್ಜಿ ಮತ್ತು ಈ ಪ್ರಕ್ರಿಯೆಗೆ ಸಂಬಂಧಿಸಿದ ಇತರೆ ಮಾಹಿತಿಗಳನ್ನು ಕರ್ನಾಟಕ ಅರಣ್ಯ ಇಲಾಖಾ ವೆಬ್‌ಸೈಟ್‌ಗೆ ಭೇಟಿನೀಡುವುದು. **https://aranya.gov.in/**ದ ಮುಖ ಪುಟದ ಕೆಳಭಾಗದಲ್ಲಿ ಇರುವ **"ನೇಮಕಾತಿ"** ಶೀರ್ಷಿಕೆಯಡಿ ಪ್ರಕಟಿಸಲಾಗುವುದು. ಅರ್ಜಿ ಸಲ್ಲಿಸಲು ಇಚ್ಛಿಸುವ ಅಭ್ಯರ್ಥಿಗಳು ತಮ್ಮ ಅರ್ಜಿಯನ್ನು ಸದರಿ ಆನ್‌ಲೈನ್ ವ್ಯವಸ್ಥೆಯ ಮೂಲಕ ಮಾತ್ರ ಸಲ್ಲಿಸತಕ್ಕದ್ದು. ಸದರಿ ವ್ಯವಸ್ಥೆಯನ್ನು ಹೊರತುಪಡಿಸಿ ಇತರೆ ಯಾವುದೇ ವಿಧದಲ್ಲಿ ಅರ್ಜಿಯನ್ನು ಸಲ್ಲಿಸಲು ಅವಕಾಶವಿರುವುದಿಲ್ಲ.

1.2. ಅರ್ಜಿಯನ್ನು ಭರ್ತಿ ಮಾಡುವ ಮೊದಲು ಅಭ್ಯರ್ಥಿಗಳು ಅಧಿಸೂಚನೆಯಲ್ಲಿ ಅಧಿಸೂಚಿಸಿದ ಸೂಚನೆ ಹಾಗೂ ಷರತ್ತುಗಳನ್ನು ಕೂಲಂಕಷವಾಗಿ ಓದಿ ಸಮರ್ಪಕವಾಗಿ ಅರ್ಥೈಸಿಕೊಂಡು ತಮಗೆ ಅನ್ವಯವಾಗುವ ವಿವರಗಳನ್ನು ಆನ್ ಲೈನ್ ಅರ್ಜಿಯಲ್ಲಿ ಭರ್ತಿ ಮಾಡತಕ್ಕದ್ದು. ಅಭ್ಯರ್ಥಿಗಳು ಭರ್ತಿ ಮಾಡಿದ ಆನ್‌ಲೈನ್ ಅರ್ಜಿಯ ಪ್ರತಿಯನ್ನು ಮುದ್ರಿಸಿ ಮಾಹಿತಿಗಾಗಿ ತಮ್ಮ ಬಳಿ ಇಟ್ಟುಕೊಳ್ಳತಕ್ಕದ್ದು. ಒಮ್ಮೆ ಅರ್ಜಿ ಸಲ್ಲಿಸಿದ ನಂತರ ಅರ್ಜಿಯಲ್ಲಿ ವಿವರಗಳನ್ನು ತಿದ್ದುಪಡಿ/ಸೇರ್ಪಡೆ ಮಾಡುವಂತೆ ನೀಡುವ ಯಾವುದೇ ಮನವಿಗಳನ್ನು ತಿರಸ್ಕರಿಸಲಾಗುವುದು. **ಆನ್ ಲೈನ್ ಅರ್ಜಿಯ ಪ್ರತಿಯನ್ನು ಅಂಚೆ ಮುಖಾಂತರ ಅಥವಾ ಮುದ್ದಾಂ ಆಗಿ ಇಲಾಖೆಗೆ ಸಲ್ಲಿಸಬೇಕಾದ ಅವಶ್ಯಕತೆ/ಅವಕಾಶವಿರುವುದಿಲ್ಲ.**

1.3. ಜನ್ಮ ದಿನಾಂಕ ದೃಢೀಕರಿಸುವ ಪ್ರಮಾಣ ಪತ್ರ, ನಿಗದಿತ ಶೈಕ್ಷಣಿಕ ವಿದ್ಯಾರ್ಹತೆಯ ಪ್ರಮಾಣ ಪತ್ರಗಳು ಹಾಗೂ ನಿಗದಿತ ಜಾತಿ/ಪ್ರವರ್ಗ/ಗ್ರಾಮೀಣ/ಕನ್ನಡ ಮಾಧ್ಯಮ/ಯೋಜನಾ ನಿರಾಶ್ರಿತ/ಸೈನಿಕ ಸೇವೆ/ಇತ್ಯಾದಿ ದೃಢೀಕರಣ ಪ್ರಮಾಣ ಪತ್ರಗಳನ್ನು ಸ್ಕ್ಯಾನ್ ಮಾಡಿ ಆನ್ ಲೈನ್ ಅರ್ಜಿ ಸಲ್ಲಿಸುವ ವೇಳೆಯಲ್ಲಿ ಅಪ್‌ಲೋಡ್ ಮಾಡತಕ್ಕದ್ದು. **ಅಭ್ಯರ್ಥಿಯು ಯಾವ ಪ್ರಮಾಣ ಪತ್ರಗಳನ್ನು ಅರ್ಜಿ ಸಲ್ಲಿಸುವ ವೇಳೆ ಅಪ್‌ಲೋಡ್ ಮಾಡಿರುತ್ತಾರೆಯೋ ಅದೇ ಪ್ರಮಾಣ ಪತ್ರಗಳನ್ನು ಆಯ್ಕೆ ಪ್ರಕ್ರಿಯೆಯ ಎಲ್ಲಾ ಹಂತಗಳಲ್ಲಿ ಪರಿಗಣನೆಗೆ ತೆಗೆದುಕೊಳ್ಳಲಾಗುವುದು. ಇದನ್ನು ಯಾವ ಹಂತದಲ್ಲಿಯೂ ಬದಲಾವಣೆ ಮಾಡಲು ಅವಕಾಶವಿರುವುದಿಲ್ಲ.**

1.4. **ಅರ್ಜಿ/ಶುಲ್ಕ ಸ್ವೀಕೃತಿ ಕಾಲಮಿತಿ:**

| | |
|---|---|
| ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಪ್ರಾರಂಭಿಕ ದಿನಾಂಕ | 20.10.2022 |
| ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ | 19.11.2022<br>ಸಂಜೆ 5.30 ಗಂಟೆಯ ವರೆಗೆ |
| ಅರ್ಜಿ ಶುಲ್ಕವನ್ನು ಪಾವತಿಸಲು ಕೊನೆಯ ದಿನಾಂಕ | 23.11.2022 |

1.5. **ಅರ್ಜಿ ಶುಲ್ಕ:**

ಅರ್ಜಿ ಶುಲ್ಕವನ್ನು ಈ ಕೆಳಗಿನಂತೆ ಪಾವತಿಸುವುದು:-

| | |
|---|---|
| ಸಾಮಾನ್ಯ ಅರ್ಹತೆ, ಪ್ರವರ್ಗ IIಎ, IIಬಿ, IIIಎ ಮತ್ತು IIIಬಿ ಪ್ರವರ್ಗಗಳಿಗೆ ಸೇರಿದ ಅಭ್ಯರ್ಥಿಗಳಿಗೆ | ಅರ್ಜಿ ಶುಲ್ಕ ರೂ. 200.00 + ಸೇವಾ ಶುಲ್ಕ ರೂ. 20.00 |
| ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಪ್ರವರ್ಗ-1 ಕ್ಕೆ ಸೇರಿದ ಅಭ್ಯರ್ಥಿಗಳಿಗೆ | ಅರ್ಜಿ ಶುಲ್ಕ ರೂ. 100.00 + ಸೇವಾ ಶುಲ್ಕ ರೂ. 20.00 |

ಆನ್ ಲೈನ್ ಮೂಲಕ ಅರ್ಜಿ ಸಲ್ಲಿಸಿದ ನಂತರ, ಇಲಾಖಾ ವೆಬ್ ಸೈಟ್ ನಿಂದ ಮುದ್ರಿತ ಅರ್ಜಿ ಶುಲ್ಕದ ಚಲನ್ ಪ್ರತಿಯನ್ನು ತೆಗೆದುಕೊಂಡು, ಇ-ಪಾವತಿ ಸೌಲಭ್ಯವಿರುವ ಅಂಚೆ ಕಚೇರಿಯಲ್ಲಿ ಸದರಿ ಪ್ರತಿಯನ್ನು ಹಾಜರುಪಡಿಸಿ, ಪ್ರವರ್ಗವಾರು ನಿಗದಿತ ಅರ್ಜಿ ಶುಲ್ಕ ಮತ್ತು ಸೇವಾ ಶುಲ್ಕವನ್ನು ಅಂಚೆ ಕಛೇರಿಯ ಮೇಲೆ ತಿಳಿಸಿರುವಂತೆ ನಿಗದಿತ ದಿನಾಂಕ ಹಾಗೂ ಸಮಯದೊಳಗೆ ಕಡ್ಡಾಯವಾಗಿ ಪಾವತಿಸತಕ್ಕದ್ದು. ಒಮ್ಮೆ ಶುಲ್ಕವನ್ನು ಪಾವತಿಸಿದ ನಂತರ, ಅದನ್ನು ಯಾವುದೇ ಸಂದರ್ಭದಲ್ಲಿ ಹಿಂತಿರುಗಿಸಲಾಗುವುದಿಲ್ಲ. ಅಥವಾ ಅದನ್ನು ಇಲಾಖೆ ನಡೆಸುವ ಇತರೆ ಪರೀಕ್ಷೆ ಅಥವಾ ನೇಮಕಾತಿಗಳಿಗೆ ಹೊಂದಿಸಿಕೊಳ್ಳಲಾಗುವುದಿಲ್ಲ. ಶುಲ್ಕವನ್ನು ಸಂದಾಯ ಮಾಡದಿದ್ದಲ್ಲಿ ಅಂತಹ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

***ವಿಶೇಷ ಸೂಚನೆ:***

*ಅಭ್ಯರ್ಥಿಗಳು ಆನ್ ಲೈನ್ ಮುಖಾಂತರವೇ ಕಡ್ಡಾಯವಾಗಿ ಅರ್ಜಿಯನ್ನು ಸಲ್ಲಿಸತಕ್ಕದ್ದು. ಇದನ್ನು ಹೊರತುಪಡಿಸಿ, ನೇರವಾಗಿ/ ಕೊರಿಯರ್/ನೊಂದಾಯಿತ ಅಂಚೆ/ಸಾಧಾರಣ ಅಂಚೆ/ ಇ-ಮೇಲ್/ಮುದ್ದಾಂ/ ಇತ್ಯಾದಿ ಯಾವುದೇ ಇತರೆ ವಿಧಾನಗಳ ಮುಖಾಂತರ ಕಳುಹಿಸಿದ ಅರ್ಜಿಗಳನ್ನು ತಿರಸ್ಕರಿಸಲಾಗುವುದು. ಇದಕ್ಕೆ ಅಭ್ಯರ್ಥಿಗಳೇ ನೇರ ಜವಾಬ್ದಾರರಾಗಿರುತ್ತಾರೆ.*

**2. ಕರ್ನಾಟಕ ಸಾರ್ವಜನಿಕ ಉದ್ಯೋಗ (ಹೈದರಾಬಾದ್ – ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) ನಿಯಮಾವಳಿ 2013ರನ್ವಯ ಕಲ್ಯಾಣ ಕರ್ನಾಟಕ ಪ್ರದೇಶಕ್ಕೆ ಮೀಸಲಿರಿಸಿದ ವಲಯ ಅರಣ್ಯಾಧಿಕಾರಿ ವೃಂದದ ಹುದ್ದೆಗಳ ವಿವರ:**

2.1. **ವೇತನ ಶ್ರೇಣಿ:** ರೂ.40900–1100–46400–1250–53900-1450–62600–1650–72500–1900–78200

2.2. **ಹುದ್ದೆಗಳ ವರ್ಗೀಕರಣ:**

(i) ಬಿ.ಎಸ್ಸಿ. (ಅರಣ್ಯಶಾಸ್ತ್ರ) ಪದವೀಧರರಿಗೆ - 5 ಹುದ್ದೆಗಳು

(ii) ಬಿ.ಎಸ್ಸಿ. (ವಿಜ್ಞಾನ) /ನಿಗದಿತ ಇಂಜಿನಿಯರಿಂಗ್ ಪದವೀಧರರಿಗೆ - 5 ಹುದ್ದೆಗಳು

2.3. **ಕಲ್ಯಾಣ ಕರ್ನಾಟಕ ಪ್ರದೇಶ ವ್ಯಾಪ್ತಿಗೆ ಬಿ.ಎಸ್ಸಿ. (ಅರಣ್ಯ ಶಾಸ್ತ್ರ) ಪದವೀಧರರಿಗೆ ಲಭ್ಯವಾಗುವ ಒಟ್ಟು5 (ಐದು) ವಲಯ ಅರಣ್ಯಾಧಿಕಾರಿ ವೃಂದದ ಹುದ್ದೆಗಳ ಮೀಸಲಾತಿ ವರ್ಗೀಕರಣ:**

| ಪ್ರವರ್ಗ | ಸಮತಳ ಮೀಸಲಾತಿ | | | | | | ಒಟ್ಟು |
|---|---|---|---|---|---|---|---|
| | ಇತರೆ | ಮಾಜಿ ಸೈನಿಕ ಅಭ್ಯರ್ಥಿ | ಮಹಿಳಾ ಅಭ್ಯರ್ಥಿ | ಯೋಜನೆಗಳಿಂದ ನಿರಾಶ್ರಿತಗೊಂಡ ಕುಟುಂಬದ ಅಭ್ಯರ್ಥಿ | ಗ್ರಾಮೀಣ ಅಭ್ಯರ್ಥಿ | ಕನ್ನಡ ಮಾಧ್ಯಮ ಅಭ್ಯರ್ಥಿ | |
| ಸಾಮಾನ್ಯ ಅರ್ಹತೆ | - | - | - | - | 1 | 1 | **2** |
| ಪರಿಶಿಷ್ಟ ಜಾತಿ | - | - | 1 | - | - | - | **1** |
| ಪರಿಶಿಷ್ಟ ಪಂಗಡ | - | - | - | - | - | - | **-** |

| ಪ್ರವರ್ಗ | ಸಮತಳ ಮೀಸಲಾತಿ | | | | | | ಒಟ್ಟು |
|---|---|---|---|---|---|---|---|
| | ಇತರೆ | ಮಾಜಿ ಸೈನಿಕ ಅಭ್ಯರ್ಥಿ | ಮಹಿಳಾ ಅಭ್ಯರ್ಥಿ | ಯೋಜನೆಗಳಿಂದ ನಿರಾಶ್ರಿತಗೊಂಡ ಕುಟುಂಬದ ಅಭ್ಯರ್ಥಿ | ಗ್ರಾಮೀಣ ಅಭ್ಯರ್ಥಿ | ಕನ್ನಡ ಮಾಧ್ಯಮ ಅಭ್ಯರ್ಥಿ | |
| ಪ್ರವರ್ಗ – I | - | - | - | - | - | - | - |
| ಪ್ರವರ್ಗ – IIಎ | 1 | - | 1 | - | - | - | **2** |
| ಪ್ರವರ್ಗ – IIಬಿ | - | - | - | - | - | - | - |
| ಪ್ರವರ್ಗ – IIIಎ | - | - | - | - | - | - | - |
| ಪ್ರವರ್ಗ – IIIಬಿ | - | - | - | - | - | - | - |
| **ಒಟ್ಟು** | **1** | **-** | **2** | **-** | **1** | **1** | **5** |

2.4. **ಕಲ್ಯಾಣ ಕರ್ನಾಟಕ ಪ್ರದೇಶ ವ್ಯಾಪ್ತಿಗೆ ಬಿ.ಎಸ್ಸಿ. (ವಿಜ್ಞಾನ)/ನಿಗದಿತ ಇಂಜಿನಿಯರಿಂಗ್ ಪದವೀಧರರಿಗೆ ಲಭ್ಯವಾಗುವ ಒಟ್ಟು5 (ಐದು) ವಲಯ ಅರಣ್ಯಾಧಿಕಾರಿ ವೃಂದದ ಹುದ್ದೆಗಳ ಮೀಸಲಾತಿ ವರ್ಗೀಕರಣ:**

| ಪ್ರವರ್ಗ | ಸಮತಳ ಮೀಸಲಾತಿ | | | | | | ಒಟ್ಟು |
|---|---|---|---|---|---|---|---|
| | ಇತರೆ | ಮಾಜಿ ಸೈನಿಕ ಅಭ್ಯರ್ಥಿ | ಮಹಿಳಾ ಅಭ್ಯರ್ಥಿ | ಯೋಜನೆಗಳಿಂದ ನಿರಾಶ್ರಿತಗೊಂಡ ಕುಟುಂಬದ ಅಭ್ಯರ್ಥಿ | ಗ್ರಾಮೀಣ ಅಭ್ಯರ್ಥಿ | ಕನ್ನಡ ಮಾಧ್ಯಮ ಅಭ್ಯರ್ಥಿ | |
| ಸಾಮಾನ್ಯ ಅರ್ಹತೆ | 1 | - | 1 | - | 1 | - | 3 |
| ಪರಿಶಿಷ್ಟ ಜಾತಿ | - | - | - | - | - | - | - |
| ಪರಿಶಿಷ್ಟ ಪಂಗಡ | - | - | - | - | - | - | - |
| ಪ್ರವರ್ಗ – I | - | - | - | - | - | - | - |
| ಪ್ರವರ್ಗ – IIಎ | - | - | 1 | - | - | - | 1 |
| ಪ್ರವರ್ಗ – IIಬಿ | 1 | - | - | - | - | - | 1 |
| ಪ್ರವರ್ಗ – IIIಎ | - | - | - | - | - | - | - |
| ಪ್ರವರ್ಗ – IIIಬಿ | - | - | - | - | - | - | - |
| **ಒಟ್ಟು** | **2** | **-** | **2** | **-** | **1** | **-** | **5** |

***ವಿಶೇಷ ಸೂಚನೆ:***

***i.*** *ಭಾರತ ಸಂವಿಧಾನದ ಅನುಚ್ಛೇದ 371(ಜೆ) ಅನುಷ್ಠಾನಕ್ಕೆ ಸಂಬಂಧಿಸಿದಂತೆ, ಹೊರಡಿಸಲಾದ ಕರ್ನಾಟಕ ಸಾರ್ವಜನಿಕ ಉದ್ಯೋಗ (ಹೈದರಾಬಾದ್ – ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) ಆದೇಶ 2013 ಹಾಗೂ ಸದರಿ ಆದೇಶಕ್ಕೆ ಸಂಬಂಧಿಸಿದಂತೆ ಹೊರಡಿಸಲಾದ ತಿದ್ದುಪಡಿಯಂತೆ ಮೀಸಲಾತಿಗೆಂದು ಗುರುತಿಸಿ, ಸ್ಥಳೀಯ ವೃಂದಕ್ಕೆ ಒಳಪಡುವ ಹುದ್ದೆಗಳನ್ನು ಅಧಿಸೂಚಿಸಲಾಗಿರುತ್ತದೆ. ಸ್ಥಳೀಯ ವೃಂದದ ಹುದ್ದೆಗಳನ್ನು ಕರ್ನಾಟಕ ಸಾರ್ವಜನಿಕ ಉದ್ಯೋಗ (ಹೈದರಾಬಾದ್ – ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) ಆದೇಶ 2013ರ ಕಂಡಿಕೆ 2(1)(ಎಫ್) ಅರ್ಥ ವಿವರಣೆಯ ಅಡಿಯಲ್ಲಿ ವರ್ಗೀಕರಿಸಲು ಅರ್ಹವಿರುವ ಅಭ್ಯರ್ಥಿಗಳಿಂದ ಮಾತ್ರ ಭರ್ತಿಮಾಡಲಾಗುವುದು. ಈ ಹಿನ್ನಲೆಯಲ್ಲಿ ಸ್ಥಳೀಯ ವೃಂದದಲ್ಲಿ ಲಭ್ಯವಿರುವ ಹುದ್ದೆಗಳಿಗೆ ಅರ್ಜಿ ಸಲ್ಲಿಸಲು ಸಾರ್ವಜನಿಕ ಉದ್ಯೋಗ ಆದೇಶದಂತೆ ಅರ್ಹ ಸ್ಥಳೀಯ ಅಭ್ಯರ್ಥಿಗಳು ಮಾತ್ರ ಅರ್ಹರಾಗಿರುತ್ತಾರೆ.*

***ii.*** *ಈ ಮೇಲ್ಕಂಡ ಖಾಲಿ ಹುದ್ದೆಗಳ ವರ್ಗೀಕರಣದಲ್ಲಿ ಅವಶ್ಯಕತೆ ಹಾಗೂ ಸಂದರ್ಭಕ್ಕೆ ಅನುಗುಣವಾಗಿ ಯಾವುದೇ ಸಂದರ್ಭದಲ್ಲಿ ಆಯ್ಕೆ ಪ್ರಾಧಿಕಾರವು ಬದಲಾವಣೆ ಮಾಡಿಕೊಳ್ಳಬಹುದಾಗಿರುತ್ತದೆ. ಈ ಮಾಹಿತಿಯನ್ನು ಕರ್ನಾಟಕ ಅರಣ್ಯ ಇಲಾಖಾ ವೆಬ್‌ಸೈಟ್:* ***https://aranya.gov.in/*** *ನಲ್ಲಿ ಮುಖ ಪುಟದ ಕೆಳ ಭಾಗದಲ್ಲಿ* ***"ನೇಮಕಾತಿ"*** *ಶೀರ್ಷಿಕೆಯ ಮೂಲಕ ಪ್ರಕಟಪಡಿಸಲಾಗುವುದು.*

## 3. ಅರ್ಹತೆ ಮತ್ತು ನಿಬಂಧನೆ/ಷರತ್ತುಗಳು:

| | |
|---|---|
| (ಅ) | ಭಾರತೀಯ ನಾಗರೀಕನಾಗಿರತಕ್ಕದ್ದು ಹಾಗೂ ಕಲ್ಯಾಣ ಕರ್ನಾಟಕ ಪ್ರದೇಶದ ಸ್ಥಳೀಯ ಅಭ್ಯರ್ಥಿಗಳು ಮಾತ್ರ ಅರ್ಜಿ ಸಲ್ಲಿಸಲು ಅರ್ಹರಾಗಿರುತ್ತಾರೆ. |
| (ಆ) | ಒಬ್ಬ ಜೀವಂತ ಪತ್ನಿಗಿಂತ ಹೆಚ್ಚು ಮಂದಿ ಪತ್ನಿಯರನ್ನು ಹೊಂದಿರುವ ಪುರುಷ ಅಭ್ಯರ್ಥಿ ಮತ್ತು ಈಗಾಗಲೇ ಇನ್ನೊಬ್ಬ ಹೆಂಡತಿ ಇರುವ ವ್ಯಕ್ತಿಯನ್ನು ಮದುವೆ |

| | |
|---|---|
| | ಆಗಿರುವ ಮಹಿಳಾ ಅಭ್ಯರ್ಥಿಯು ಸರ್ಕಾರದಿಂದ ಪೂರ್ವಾನುಮತಿಯನ್ನು ಪಡೆಯದೆ ನೇಮಕಾತಿಗೆ ಅರ್ಹರಾಗಿರುವುದಿಲ್ಲ. |
| (ಇ) | ಅಭ್ಯರ್ಥಿಯು ಮಾನಸಿಕವಾಗಿ ಮತ್ತು ದೈಹಿಕವಾಗಿ ಆರೋಗ್ಯವಂತರಾಗಿರಬೇಕು ಹಾಗೂ ಅವರ ನೇಮಕಾತಿಯು ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆತಂಕವನ್ನುಂಟು ಮಾಡುವ ಸಂಭವವಿರುವ ಯಾವುದೇ ದೈಹಿಕ ನ್ಯೂನ್ಯತೆಯಿಂದ ಮುಕ್ತರಾಗಿರಬೇಕು. |
| (ಈ) | ದೈಹಿಕವಾಗಿ ಅನರ್ಹರಾಗಿದ್ದಾರೆಂಬುದಾಗಿ ವೈದ್ಯಕೀಯ ಮಂಡಳಿಯ ವರದಿಯ ಮೇಲೆ ಅನರ್ಹರೆಂಬುದಾಗಿ ತಿರಸ್ಕರಿಸುವ ಪೂರ್ಣ ವಿವೇಚನೆಯನ್ನು ಆಯ್ಕೆ ಪ್ರಾಧಿಕಾರವು ಕಾಯ್ದಿರಿಸಿಕೊಂಡಿದೆ ಮತ್ತು ಸರ್ಕಾರದ ವಿವೇಚನೆಯು ಯಾವುದೇ ವಿಧದಲ್ಲೂ ಈ ನಿಯಮಗಳ ಮೂಲಕ ಸೀಮಿತವಾಗಿರುವುದಿಲ್ಲ. |

3.1. **ವಿದ್ಯಾರ್ಹತೆ:**

ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಅಭ್ಯರ್ಥಿಯು ನಿಗಧಿತ ಶೈಕ್ಷಣಿಕ ವಿದ್ಯಾರ್ಹತೆಯನ್ನು ಹೊಂದಿರತಕ್ಕದ್ದು ಹಾಗೂ **ಶೈಕ್ಷಣಿಕ ವಿದ್ಯಾರ್ಹತೆಯಲ್ಲಿ ನಿಗದಿಪಡಿಸಿದ ಗರಿಷ್ಠ ಅಂಕಗಳಿಗೆ ಕನಿಷ್ಠ ಶೇಕಡ 50 ಅಂಕಗಳನ್ನು ಪಡೆದು (ಎಲ್ಲಾ ವಾರ್ಷಿಕ / ಸೆಮಿಸ್ಟರ್ ಪರೀಕ್ಷೆಗಳು ಒಳಗೊಂಡಂತೆ) ತೇರ್ಗಡೆಯಾಗಿರಬೇಕು.**

3.1.1. ಅಭ್ಯರ್ಥಿಯು ಸರ್ಕಾರದಿಂದ ಮಾನ್ಯತೆ ಪಡೆದ ಅಂಗೀಕೃತ ವಿಶ್ವವಿದ್ಯಾಲಯದಲ್ಲಿ ಅರಣ್ಯ ಶಾಸ್ತ್ರ ವಿಷಯದಲ್ಲಿ ಪದವೀಧರರಾಗಿರಬೇಕು.

ಅಥವಾ

3.1.2. ಅಭ್ಯರ್ಥಿಯು ಸರ್ಕಾರದಿಂದ ಮಾನ್ಯತೆ ಪಡೆದ ಅಂಗೀಕೃತ ವಿಶ್ವವಿದ್ಯಾಲಯದಲ್ಲಿ ಈ ಕೆಳಕಂಡ ವಿಷಯಗಳಲ್ಲಿ ಯಾವುದಾದರೂ ಒಂದು ವಿಷಯವನ್ನು ಒಳಗೊಂಡಂತೆ ಬಿ.ಎಸ್ಸಿ. ಪದವೀಧರರಾಗಿರಬೇಕು.

(i) ಕೃಷಿ;
(ii) ಅರಣ್ಯ ಶಾಸ್ತ್ರ;
(iii) ತೋಟಗಾರಿಕೆ;
(iv) ಪಶುವೈದ್ಯಕೀಯ ಮತ್ತು ಪಶುಸಂಗೋಪನಾ ವಿಜ್ಞಾನ;
(v) ಮೀನುಗಾರಿಕೆ;
(vi) ವನ್ಯಜೀವಿ;
(vii) ಪರಿಸರ ವಿಜ್ಞಾನ;
(viii) ರಸಾಯನಶಾಸ್ತ್ರ;
(ix) ಭೂ ವಿಜ್ಞಾನ;
(x) ಗಣಿತಶಾಸ್ತ್ರ;
(xi) ಭೌತಶಾಸ್ತ್ರ;
(xii) ಸಸ್ಯಶಾಸ್ತ್ರ;
(xiii) ಪ್ರಾಣಿಶಾಸ್ತ್ರ;
(xiv) ಸಂಖ್ಯಾಶಾಸ್ತ್ರ;
(xv) ಕಂಪ್ಯೂಟರ್ ಅಪ್ಲಿಕೇಷನ್;

ಅಥವಾ

3.1.3. ಅಭ್ಯರ್ಥಿಯು ಸರ್ಕಾರದಿಂದ ಮಾನ್ಯತೆ ಪಡೆದ ಅಂಗೀಕೃತ ವಿಶ್ವವಿದ್ಯಾಲಯದಲ್ಲಿ ಈ ಕೆಳಕಂಡ Engineering/Technology ಪದವೀಧರರಾಗಿರಬೇಕು.

(i) ಕೃಷಿ;
(ii) ಕೆಮಿಕಲ್;
(iii) ಸಿವಿಲ್;
(iv) ಎಲೆಕ್ಟ್ರಿಕಲ್;
(v) ಎಲೆಕ್ಟ್ರಾನಿಕ್ಸ್;
(vi) ಮೆಕ್ಯಾನಿಕಲ್;
(vii) ಕಂಪ್ಯೂಟರ್ ಸೈನ್ಸ್;

3.2. **ವಯೋಮಿತಿ:**

ಕರ್ನಾಟಕ ನಾಗರಿಕ ಸೇವೆಗಳ (ಸಾಮಾನ್ಯ ನೇಮಕಾತಿ) ನಿಯಮಗಳು 1977ರ ನಿಯಮ 6ರಲ್ಲಿ ಒಳಗೊಂಡಿರುವ ಯಾವುದೇ ವಿಷಯದ ಹೊರತಾಗಿಯೂ ಅಭ್ಯರ್ಥಿಗಳು ಅಧಿಸೂಚನೆ ಹೊರಡಿಸಿದ ದಿನಾಂಕಕ್ಕೆ ಕನಿಷ್ಠ **18** ವರ್ಷ ವಯಸ್ಸನ್ನು ಪೂರೈಸಿರತಕ್ಕದ್ದು ಹಾಗೂ ಅಧಿಸೂಚನೆ ಹೊರಡಿಸಿದ ದಿನಾಂಕಕ್ಕೆ ಈ ಕೆಳಗಿನಂತೆ ಗರಿಷ್ಠ ವಯೋಮಿತಿಯೊಳಗಿರತಕ್ಕದ್ದು:

| | | |
|---|---|---|
| **3.2.1** | ಸಾಮಾನ್ಯ ಅರ್ಹತೆ | ಗರಿಷ್ಠ ವಯೋಮಿತಿ 28 ವರ್ಷಗಳು |
| | ಪರಿಶಿಷ್ಠ ಜಾತಿ, ಪರಿಶಿಷ್ಠ ಪಂಗಡ ಮತ್ತು ಪ್ರವರ್ಗ-I | ಗರಿಷ್ಠ ವಯೋಮಿತಿ 33 ವರ್ಷಗಳು |
| | ಪ್ರವರ್ಗ IIಎ, IIಬಿ, IIIಎ, IIIಬಿ ಹಿಂದುಳಿದ ಪ್ರವರ್ಗಗಳು | ಗರಿಷ್ಠ ವಯೋಮಿತಿ 31 ವರ್ಷಗಳು |
| **3.2.2** | ಮಾಜಿ ಸೈನಿಕರಿಗೆ ವಯೋಮಿತಿ: | ಸಶಸ್ತ್ರ ಪಡೆಗಳಲ್ಲಿ ಸೇವೆ ಸಲ್ಲಿಸಿ ನಿಯಮಾನುಸಾರ ನಿವೃತ್ತಿ/ಡಿಮೊಬಿಲೈಸೇಷನ್ (Demobilisation) ಅಥವಾ ರಿಟ್ರೆಂಚ್‌ಮೆಂಟ್ (Retrenchment) ಹೊಂದಿದ ಮಾಜಿ ಸೈನಿಕ ಅಭ್ಯರ್ಥಿಗಳಿಗೆ ಅವರು ಯಾವ ಪ್ರವರ್ಗಕ್ಕೆ ಸೇರಿರುತ್ತಾರೆಯೊ ಆ ಪ್ರವರ್ಗಕ್ಕೆ ಮೇಲಿನ ಸಂಖ್ಯೆ: 3.2.1ರಲ್ಲಿ ನಿಗದಿಪಡಿಸಿದ ಗರಿಷ್ಠ ವಯೋಮಿತಿಗೆ ಅವರು ಎಷ್ಟು ವರ್ಷ ಸಶಸ್ತ್ರ ಪಡೆಗಳಲ್ಲಿ ಸೇವೆ ಸಲ್ಲಿಸಿರುವರೋ ಅಷ್ಟು ವರ್ಷಗಳಿಗೆ ಮೂರು (3) ವರ್ಷ ಸೇರಿಸಿದರೆ ಎಷ್ಟು ವರ್ಷಗಳಾಗುವುದೋ ಅಷ್ಟು ವರ್ಷಗಳ ಸಡಿಲಿಕೆಯನ್ನು ನೀಡಲಾಗುವುದು. |

## 4. ಅರ್ಜಿಗಳ ಪರಾಮರ್ಶೆ:

ಕರ್ನಾಟಕ ನಾಗರೀಕ ಸೇವಾ (ನೇರ ನೇಮಕಾತಿ)(ಸಾಮಾನ್ಯ) ನಿಯಮಾವಳಿಗಳು 2021 ರನ್ವಯ ಹಾಗೂ ಸರ್ಕಾರದ ಅಧಿಸೂಚನೆ ಸಂಖ್ಯೆ: FEE 72 FEG 2017 ದಿನಾಂಕ: 28.02.2022ರ ಕರ್ನಾಟಕ ಅರಣ್ಯ ಇಲಾಖಾ ಸೇವೆಗಳು (ನೇಮಕಾತಿ) (ತಿದ್ದುಪಡಿ) ನಿಯಮಾವಳಿ 2018 ಮತ್ತು ಕರ್ನಾಟಕ ಸಾರ್ವಜನಿಕ ಉದ್ಯೋಗ (ಹೈದರಾಬಾದ್ – ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) ನಿಯಮಾವಳಿ 2013ರಂತೆ ಹಾಗೂ ಪ್ರಸ್ತುತ ಚಾಲ್ತಿಯಲ್ಲಿರುವ ಮೀಸಲಾತಿ ನಿಯಮಗಳಂತೆ ಮೀಸಲಾತಿ ವರ್ಗೀಕರಣ ಮಾಡಲಾಗಿದೆ. ಅಭ್ಯರ್ಥಿಯು ಆನ್ ಲೈನ್ ಅರ್ಜಿಸಲ್ಲಿಸುವ ಸಂದರ್ಭದಲ್ಲಿ ನಮೂದಿಸಿರುವ ಮಾಹಿತಿ ಮತ್ತು ವಿವರಗಳು ಹಾಗೂ ಅರ್ಜಿಯೊಂದಿಗೆ ಅಪ್ ಲೋಡ್ ಮಾಡಿರುವ ಎಲ್ಲಾ ದಾಖಲೆಗಳ ಆಧಾರದ ಮೇಲೆ ಅರ್ಜಿಯನ್ನು ಪರಿಗಣನೆಗೆ ತೆಗೆದುಕೊಳ್ಳಲಾಗುವುದು. ಕ್ರಮಬದ್ಧವಲ್ಲದ, ಅಪೂರ್ಣ/ಅಸ್ಪಷ್ಟ ಮಾಹಿತಿಗಳಿಂದ ಕೂಡಿದ ಅರ್ಜಿಗಳನ್ನು ಪ್ರಾಥಮಿಕ ಹಂತದಲ್ಲಿಯೇ ತಿರಸ್ಕರಿಸಲಾಗುವುದು. ಇದಲ್ಲದೆ, ಅಪ್ ಲೋಡ್ ಮಾಡಬೇಕಾಗಿರುವ ದಾಖಲೆಗಳ ಪೈಕಿ ಯಾವುದಾದರೂ ದಾಖಲೆಗಳನ್ನು ಅಪ್ ಲೋಡ್ ಮಾಡದೆ ಇದ್ದಲ್ಲಿ, ಅಭ್ಯರ್ಥಿಯ ಅರ್ಜಿಯನ್ನು ತಿರಸ್ಕರಿಸಲಾಗುವುದು.

## 5. ಮೂಲ ದಾಖಲೆ/ಪ್ರಮಾಣ ಪತ್ರಗಳ ಪರಿಶೀಲನೆ:

5.1. ಅಭ್ಯರ್ಥಿ ಅರ್ಜಿಯಲ್ಲಿ ನಮೂದಿಸಿರುವ ಎಲ್ಲಾ ಮಾಹಿತಿ/ವಿವರಗಳಿಗೆ ಪೂರಕವಾಗಿ ವಯಸ್ಸು, [ಜನ್ಮ ದಿನಾಂಕವನ್ನು ನಮೂದಿಸಿರುವ ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆಯ ಅಂಕಪಟ್ಟಿ/ವರ್ಗಾವಣೆಯ ಪ್ರಮಾಣ ಪತ್ರ] ಶೈಕ್ಷಣಿಕ ಅರ್ಹತೆ, ಮೀಸಲಾತಿ, ಇತ್ಯಾದಿಗಳನ್ನು ಅರ್ಜಿಸಲ್ಲಿಸುವ ವೇಳೆ ವೆಬ್‌ಸೈಟ್‌ಗೆ ಅಪ್‌ಲೋಡ್ ಮಾಡತಕ್ಕದ್ದು. ಈ ರೀತಿ ಅಪ್‌ಲೋಡ್ ಮಾಡಿರುವ ದಾಖಲೆಗಳ ಪರಿಶೀಲನೆಯನ್ನು ಪ್ರತ್ಯೇಕವಾಗಿ **ನಿಗಧಿಪಡಿಸಿದ ದಿನಾಂಕದಂದು ಆಯ್ಕೆ ಪ್ರಾಧಿಕಾರ ಅಥವಾ ಮುಖ್ಯ ಪರೀಕ್ಷಕರ ಅಥವಾ ಅವರು ನೇಮಿಸಿರುವ/ನಿಯೋಜಿಸಿರುವ ಅಧಿಕಾರಿಗಳ ಎದುರು ಪರಿಶೀಲನೆಗೆ ಮೂಲ ದಾಖಲೆಗಳನ್ನು ಕಡ್ಡಾಯವಾಗಿ ಹಾಜರುಪಡಿಸಬೇಕು**. ಮೂಲ ದಾಖಲೆ/ಪ್ರಮಾಣ ಪತ್ರಗಳನ್ನು ಹಾಜರು ಪಡಿಸಲು ಯಾವುದೇ ಕಾರಣಕ್ಕೂ ಮತ್ತು ಯಾವುದೇ ಸನ್ನಿವೇಶದಲ್ಲಿಯೂ ಕಾಲ ವಿಸ್ತರಣೆ ನೀಡಲಾಗುವುದಿಲ್ಲ. ಒಂದು ವೇಳೆ, ಆನ್

ಲೈನ್ ಅರ್ಜಿಯಲ್ಲಿ ನಮೂದಿಸಿರುವ ಮಾಹಿತಿ/ವೆಬ್‌ಸೈಟ್‌ಗೆ ಅಪ್‌ಲೋಡ್ ಮಾಡಿರುವ ಮಾಹಿತಿ/ಮೂಲ ದಾಖಲೆಗಳ ಪರಿಶೀಲನಾ ವೇಳೆ ಹಾಜರುಪಡಿಸುವ ದಾಖಲೆ ಹೊಂದಿರಬೇಕು. ಯಾವುದೇ ರೀತಿಯ ಗೊಂದಲ/ವ್ಯತಿರಿಕ್ತ ದಾಖಲೆ-ಪ್ರಮಾಣ ಪತ್ರಗಳನ್ನು ಸಲ್ಲಿಸಿದಲ್ಲಿ ಅಥವಾ ವ್ಯತ್ಯಯಗಳು ಕಂಡುಬಂದಲ್ಲಿ ಅಂತಹ ದಾಖಲೆ/ಪ್ರಮಾಣ ಪತ್ರಗಳನ್ನು ಪರಿಗಣನೆಗೆ ತೆಗೆದುಕೊಳ್ಳುವುದಿಲ್ಲ.

5.2. **ಒಂದು ವೇಳೆ, ಅರ್ಜಿಯಲ್ಲಿ ನಮೂದಿಸಿರುವ ದಾಖಲೆಗಳನ್ನು ನಿಗದಿತ ದಿನಾಂಕದಂದು ಸಲ್ಲಿಸಲು ವಿಫಲರಾದಲ್ಲಿ ಅಂತಹ ಅಭ್ಯರ್ಥಿಯ ಅಭ್ಯರ್ಥಿತನವನ್ನು ರದ್ದುಪಡಿಸಲಾಗುವುದು ಹಾಗೂ ಮುಂದಿನ ಆಯ್ಕೆ ಪ್ರಕ್ರಿಯೆಯಿಂದ ಕೈಬಿಡಲಾಗುವುದು.**

5.3. ಅಭ್ಯರ್ಥಿಯು ಎಲ್ಲಾ ಸಂಧರ್ಭದಲ್ಲಿಒಂದೇ ತರಹದ ದಾಖಲೆಗಳನ್ನು ಸಲ್ಲಿಸತಕ್ಕದ್ದು, ಈ ಬಗ್ಗೆಅಭ್ಯರ್ಥಿಯು ಬಹಳ ಎಚ್ಚರಿಕೆ ವಹಿಸಲು ಸೂಚಿಸಿದೆ. ವಿಭಿನ್ನ ಮಾಹಿತಿಗಳನ್ನು ಸಲ್ಲಿಸಿದ್ದಲ್ಲಿ ಅಭ್ಯರ್ಥಿಯ ಅರ್ಜಿಯನ್ನು ತಿರಸ್ಕರಿಸಲಾಗುವುದು.

**6. ನೇಮಕಾತಿ/ಆಯ್ಕೆ ವಿಧಾನ:**
ಸದರಿ ಹುದ್ದೆಗಳನ್ನು ಸರ್ಕಾರದ ಅಧಿಸೂಚನೆ ಸಂಖ್ಯೆ: FEE 72 FEG 2017 ದಿನಾಂಕ: 28.02.2022ರ ಕರ್ನಾಟಕ ಅರಣ್ಯ ಇಲಾಖಾ ಸೇವೆಗಳು (ನೇಮಕಾತಿ) (ತಿದ್ದುಪಡಿ) ನಿಯಮಾವಳಿ, 2018 ಮತ್ತು ಕರ್ನಾಟಕ ಸಾರ್ವಜನಿಕ ಉದ್ಯೋಗ (ಹೈದರಾಬಾದ್ – ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) ನಿಯಮಾವಳಿ, 2013ರಂತೆ ದೈಹಿಕ ತಾಳ್ವಿಕೆ, ದೈಹಿಕ ಕಾರ್ಯ ಸಮರ್ಥತೆ ಮತ್ತು ವೈದ್ಯಕೀಯ ಪರೀಕ್ಷೆಗಳ ದೈಹಿಕ ಮಾನದಂಡಗಳನ್ನು ಪೂರೈಸದ ಹೊರತು ಅಂತಹ ಅಭ್ಯರ್ಥಿ ನೇಮಕಾತಿಗೆ ಅರ್ಹನಾಗಿರತಕ್ಕದ್ದಲ್ಲ ಮತ್ತು ಕರ್ನಾಟಕ ನಾಗರೀಕ ಸೇವಾ (ನೇರ ನೇಮಕಾತಿ) (ಸಾಮಾನ್ಯ) ನಿಯಮಾವಳಿಗಳು 2021ರ ನಿಯಮ 5(ಡಿ) ಪ್ರಕಾರ "ನಡೆಸಲಾದ ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಗಳಿಸಿದ ಅಂಕಗಳ ಶೇಕಡವಾರು ಪ್ರಮಾಣದ ಆಧಾರದ ಮೇಲೆ (on the basis of the percentage of marks secured in competative examination)" ಹಾಗೂ ಚಾಲ್ತಿಯಲ್ಲಿರುವ ಮೀಸಲಾತಿ ನಿಯಮಗಳನ್ವಯ ಆಯ್ಕೆ ಮಾಡಲಾಗುವುದು.

6.1. **ವಸ್ತುನಿಷ್ಠ ಮಾದರಿ (Objective Type) ಸಾಮಾನ್ಯ ಸ್ಪರ್ಧಾತ್ಮಕ ಪರೀಕ್ಷೆಯ ವಿವರ:**

| | | | |
|---|---|---|---|
| 1 | ಪತ್ರಿಕೆ – I | ಸಾಮಾನ್ಯ ಜ್ಞಾನ ಮತ್ತು ಆಪ್ಟಿಟ್ಯೂಡ್ ಪರೀಕ್ಷೆ | 150 ಅಂಕಗಳು |
| 2 | ಪತ್ರಿಕೆ – II | ಐಚ್ಛಿಕ ವಿಷಯ<br>(ನಿಗದಿಪಡಿಸಿದ ಯಾವುದಾದರೂ ಒಂದು) | 150 ಅಂಕಗಳು |

**6.1.1. ಪತ್ರಿಕೆ –I** **ನಿಗದಿತ ಸಮಯ: 2.30 ಗಂಟೆಗಳು**

| ಕ್ರ. ಸಂ. | ಕೋಡ್ | ವಿಷಯ |
|---|---|---|
| 1 | 01 | ಸಾಮಾನ್ಯ ಜ್ಞಾನ ಮತ್ತು ಆಪ್ಟಿಟ್ಯೂಡ್ ಪರೀಕ್ಷೆ |

**6.1.2. ಪತ್ರಿಕೆ –II** **ನಿಗದಿತ ಸಮಯ: 2.30 ಗಂಟೆಗಳು**

| ಕ್ರ. ಸಂ. | ಕೋಡ್ | ಐಚ್ಛಿಕ ವಿಷಯಗಳು |
|---|---|---|
| 1 | 02 | ಅರಣ್ಯ ಶಾಸ್ತ್ರ (Forestry) |
| 2 | 03 | ಸಸ್ಯಶಾಸ್ತ್ರ (Botany) |
| 3 | 04 | ಪ್ರಾಣಿಶಾಸ್ತ್ರ (Zoology) |
| 4 | 05 | ಗಣಿತಶಾಸ್ತ್ರ (Mathematics) |
| 5 | 06 | ರಸಾಯನಶಾಸ್ತ್ರ (Chemistry) |
| 6 | 07 | ಭೌತಶಾಸ್ತ್ರ (Physics) |
| 7 | 08 | ಕೃಷಿ (Agriculture) |
| 8 | 09 | ಸಿವಿಲ್ ಇಂಜಿನಿಯರಿಂಗ್ (Civil Engineering) |
| 9 | 10 | ಮೆಕ್ಯಾನಿಕಲ್ ಇಂಜಿನಿಯರಿಂಗ್ (Mechanical Engineering) |

| ಕ್ರ. ಸಂ. | ಕೋಡ್ | ಐಚ್ಛಿಕ ವಿಷಯಗಳು |
|---|---|---|
| 10 | 11 | ಕೆಮಿಕಲ್ ಇಂಜಿನಿಯರಿಂಗ್ (Chemical Engineering) |
| 11 | 12 | ಕೃಷಿ ಇಂಜಿನಿಯರಿಂಗ್ (Agriculture Engineering) |
| 12 | 13 | ಎಲೆಕ್ಟ್ರಿಕಲ್ ಇಂಜಿನಿಯರಿಂಗ್ (Electrical Engineering) |
| 13 | 14 | ಎಲೆಕ್ಟ್ರಾನಿಕ್ಸ್ ಇಂಜಿನಿಯರಿಂಗ್ (Electronics Engineering) |
| 14 | 15 | ಕಂಪ್ಯೂಟರ್ ಸೈನ್ಸ್ (Computer Science Engineering) |
| 15 | 16 | ಕಂಪ್ಯೂಟರ್ ಅಪ್ಲಿಕೇಶನ್ (Computer Application) |
| 16 | 17 | ಭೂ ವಿಜ್ಞಾನ (Geology) |
| 17 | 18 | ಸಂಖ್ಯಾಶಾಸ್ತ್ರ (Statistics) |
| 18 | 19 | ತೋಟಗಾರಿಕೆ (Horticulture) |
| 19 | 20 | ಪರಿಸರ ವಿಜ್ಞಾನ (Environment Science) |
| 20 | 21 | ಮೀನುಗಾರಿಕೆ (Fisheries) |
| 21 | 22 | ವನ್ಯಜೀವಿ (Wildlife) |
| 22 | 23 | ಪಶುವೈದ್ಯಕೀಯ ಮತ್ತು ಪಶುಸಂಗೋಪನಾ ವಿಜ್ಞಾನ (Animal Husbandry and Veterinary Science) |

***ವಿಶೇಷ ಸೂಚನೆ:***

*(i)* **ಮೇಲೆ ತಿಳಿಸಿರುವ ಐಚ್ಛಿಕ ವಿಷಯಗಳ ಪೈಕಿ ಅಭ್ಯರ್ಥಿಯು ಬಯಸುವ ಯಾವುದಾದರೂ ಒಂದು ಐಚ್ಛಿಕ ವಿಷಯವನ್ನು ಲಿಖಿತ ಪರೀಕ್ಷೆಗೆ ಆಯ್ಕೆ ಮಾಡಿಕೊಳ್ಳಬಹುದು. ಲಿಖಿತ ಪರೀಕ್ಷೆಗೆ ಆಯ್ಕೆ ಮಾಡಿಕೊಂಡ ಐಚ್ಛಿಕ ವಿಷಯವನ್ನು ಆನ್ ಲೈನ್ ಅರ್ಜಿಯಲ್ಲಿ ನಮೂದಿಸಬೇಕು.**

*(ii)* ಪ್ರಶ್ನೆ ಪತ್ರಿಕೆಗಳು ಕನ್ನಡ ಮತ್ತು ಆಂಗ್ಲ ಭಾಷೆಯಲ್ಲಿ ಮಾತ್ರ ಇರುತ್ತದೆ.

*(iii)* ಅಭ್ಯರ್ಥಿಗಳು ಇಲಾಖೆ ನಡೆಸುವ ಎಲ್ಲಾ ಲಿಖಿತ ಪರೀಕ್ಷೆಗಳಿಗೆ ಕಡ್ಡಾಯವಾಗಿ ಹಾಜರಾಗಬೇಕು. ಯಾವುದೇ ಒಂದು ಪರೀಕ್ಷೆಗೆ ಗೈರುಹಾಜರಾದರೂ ಉಳಿದ ಪತ್ರಿಕೆಯಲ್ಲಿ ಪಡೆದ ಅಂಕಗಳನ್ನು ಪ್ರಕಟಿಸಲಾಗುವುದಿಲ್ಲ ಹಾಗೂ ಉಳಿದ ಪತ್ರಿಕೆಯಲ್ಲಿ ಎಷ್ಟೇ ಅಂಕಗಳನ್ನು ಗಳಿಸಿದರೂ ಸಹ ಅಂತಹ ಅಭ್ಯರ್ಥಿಗಳನ್ನು ಮುಂದಿನ ಆಯ್ಕೆ ಪ್ರಕ್ರಿಯೆಗೆ ಪರಿಗಣಿಸಲಾಗುವುದಿಲ್ಲ. **ಅಭ್ಯರ್ಥಿಗಳು ಉತ್ತರ ಪತ್ರಿಕೆಯಲ್ಲಿ ಪ್ರಶ್ನೆ ಪತ್ರಿಕೆಯ ಸಂಖ್ಯೆ *ಹಾಗೂ* ಕೋಡ್ ಬರೆಯದಿದ್ದಲ್ಲಿ ಅಂತಹ ಉತ್ತರ ಪತ್ರಿಕೆಗಳನ್ನು ಮೌಲ್ಯಮಾಪನ ಮಾಡಲಾಗುವುದಿಲ್ಲ**.

**(iv)** ಮೇಲೆ ತಿಳಿಸಿರುವ ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ, ಅಭ್ಯರ್ಥಿಗಳು ಈ ಕೆಳಗೆ ಸೂಚಿಸಿದ ಕನಿಷ್ಠ ಅಂಕಗಳನ್ನು ಪಡೆದುಕೊಳ್ಳಬೇಕಾಗಿರುತ್ತದೆ. ಅಂತಹ ಅಭ್ಯರ್ಥಿಗಳನ್ನು ಮಾತ್ರ ಮುಂದಿನ ನೇಮಕಾತಿ ಪ್ರಕ್ರಿಯೆಗಳಿಗೆ ಪರಿಗಣಿಸಲಾಗುವುದು. ಈ ಕೆಳಗೆ ಸೂಚಿಸಿದ ಕನಿಷ್ಠ ಅಂಕಗಳಿಗಿಂತ ಕಡಿಮೆ ಅಂಕಗಳನ್ನು ಪಡೆದಿರುವ ಅಭ್ಯರ್ಥಿಗಳನ್ನು ಮುಂದಿನ ನೇಮಕಾತಿ ಪ್ರಕ್ರಿಯೆಗೆ ಪರಿಗಣಿಸಲು ಅರ್ಹರಾಗಿರುವುದಿಲ್ಲ ಮತ್ತು ಅಂತಹ ಅಭ್ಯರ್ಥಿಗಳ ಅಭ್ಯರ್ಥಿತ್ವವನ್ನು ನೇಮಕಾತಿ ಪ್ರಕ್ರಿಯೆಯಿಂದ ಕೈಬಿಡಲಾಗುವುದು.

**a. ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಗಳಿಸಬೇಕಾದ ಕನಿಷ್ಠ ಅಂಕಗಳು:**

**i.** ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡಕ್ಕೆ ಸೇರಿದ ಅಭ್ಯರ್ಥಿಗಳಿಗೆ ಸಂಬಂಧಿಸಿದಂತೆ 300 ಅಂಕಗಳಿಗೆ ಕನಿಷ್ಠ 105 ಅಂಕಗಳನ್ನು ಪಡೆಯಬೇಕಾಗಿರುತ್ತದೆ.

**ii.** ಇತರೆ ಪ್ರವರ್ಗಕ್ಕೆ ಸೇರಿದ ಅಭ್ಯರ್ಥಿಗಳಿಗೆ ಸಂಬಂಧಿಸಿದಂತೆ 300 ಅಂಕಗಳಿಗೆ ಕನಿಷ್ಠ 120 ಅಂಕಗಳನ್ನು ಪಡೆಯಬೇಕಾಗಿರುತ್ತದೆ.

**(v)** ಪತ್ರಿಕೆ –I (ಸಾಮಾನ್ಯ ಜ್ಞಾನ ಮತ್ತು ಆಪ್ಟಿಟ್ಯೂಡ್) ಮತ್ತು ಪತ್ರಿಕೆ –II (ಒಂದು ಐಚ್ಛಿಕ ವಿಷಯ) ರಲ್ಲಿ ಅಭ್ಯರ್ಥಿಯು ಗಳಿಸಿದ ಒಟ್ಟು ಅಂಕಗಳ ಮೆರಿಟ್ ಆಧಾರದ ಮೇಲೆ ಬಿ.ಎಸ್ಸಿ (ಅರಣ್ಯ

ಶಾಸ್ತ್ರ) ಪದವೀಧರ ಅಭ್ಯರ್ಥಿಗಳು ಮತ್ತು ಬಿ.ಎಸ್ಸಿ (ವಿಜ್ಞಾನ)/ನಿಗದಿತ ಇಂಜಿನಿಯರಿಂಗ್ ಪದವೀಧರ ಅಭ್ಯರ್ಥಿಗಳನ್ನು ಪ್ರಚಲಿತ ಮೀಸಲಾತಿ ನಿಯಮಾನುಸಾರ 1:10 (ಹುದ್ದೆ:ಅಭ್ಯರ್ಥಿ) ಅನುಪಾತದಲ್ಲಿ ಆಯ್ಕೆ ಮಾಡಿ, ಪಟ್ಟಿಯನ್ನು ತಯಾರಿಸಲಾಗುವುದು. ಒಂದು ವೇಳೆ ಇಬ್ಬರು ಅಥವಾ ಅದಕ್ಕಿಂತ ಹೆಚ್ಚು ಅಭ್ಯರ್ಥಿಗಳು ಪಡೆದ ಒಟ್ಟು ಅಂಕಗಳು ಸಮಾನವಾಗಿದ್ದರೆ, ವಯಸ್ಸಿನಲ್ಲಿ ಹಿರಿಯರನ್ನು ಕಿರಿಯರಿಗಿಂತ ಮೇಲಕ್ಕೆ ಇರಿಸಲಾಗುತ್ತದೆ ಮತ್ತು ಅದರ ಪ್ರಕಾರ ಇಂಟರ್-ಸೆಮೆರಿಟ್ ನಿರ್ಧರಿಸಲಾಗುತ್ತದೆ.

**(vi)** 1:10 (ಹುದ್ದೆ:ಅಭ್ಯರ್ಥಿ) ಅನುಪಾತದಲ್ಲಿ ಆಯ್ಕೆ ಮಾಡಲಾದ ಬಿ.ಎಸ್ಸಿ (ಅರಣ್ಯ ಶಾಸ್ತ್ರ) ಪದವೀಧರ ಅಭ್ಯರ್ಥಿಗಳು ಮತ್ತು ಬಿ.ಎಸ್ಸಿ (ವಿಜ್ಞಾನ)/ನಿಗದಿತ ಇಂಜಿನಿಯರಿಂಗ್ ಪದವೀಧರ ಅಭ್ಯರ್ಥಿಗಳು ಇಲಾಖೆ ನಡೆಸುವ ದೈಹಿಕ ತಾಳ್ವಿಕೆ ಪರೀಕ್ಷೆ, ದೈಹಿಕ ಕಾರ್ಯಸಮರ್ಥತೆ ಹಾಗೂ ವೈದ್ಯಕೀಯ ಪರೀಕ್ಷೆಗಳಿಗೆ ನಿಗದಿತ ದಿನಾಂಕಗಳಂದು ಕಡ್ಡಾಯವಾಗಿ ಹಾಜರಾಗಬೇಕು.

**7. ದೈಹಿಕತಾಳ್ವಿಕೆ ಮತ್ತು ದೈಹಿಕ ಕಾರ್ಯ ಸಮರ್ಥತೆ ಪರೀಕ್ಷೆಗಳು:**

ದೈಹಿಕತಾಳ್ವಿಕೆ ಮತ್ತು ದೈಹಿಕ ಕಾರ್ಯ ಸಮರ್ಥತೆ ಪರೀಕ್ಷೆಗಳ ಕುರಿತು ದಿನಾಂಕವನ್ನು ಕಾಲಕಾಲಕ್ಕೆ ಕರ್ನಾಟಕ ಅರಣ್ಯ ಇಲಾಖಾ ವೆಬ್‌ಸೈಟ್: **https://aranya.gov.in/** ನಲ್ಲಿ ಮುಖ ಪುಟದ ಕೆಳ ಭಾಗದಲ್ಲಿ **"ನೇಮಕಾತಿ"** ಶೀರ್ಷಿಕೆಯ ಮೂಲಕ ಪ್ರಕಟಪಡಿಸಲಾಗುವುದು.

7.1. **ದೈಹಿಕ ತಾಳ್ವಿಕೆ ಪರೀಕ್ಷೆ:**

| | | | |
|---|---|---|---|
| ಪುರುಷ ಅಭ್ಯರ್ಥಿಗಳಿಗೆ | : | 1600 ಮೀಟರ್ ಓಟ | 07 ನಿಮಿಷಗಳ ಅವಧಿಯಲ್ಲಿ ಪೂರ್ಣಗೊಳಿಸಬೇಕು. |
| ಮಹಿಳಾ ಅಭ್ಯರ್ಥಿಗಳಿಗೆ ಹಾಗೂ ಮಾಜಿ ಸೈನಿಕ ಅಭ್ಯರ್ಥಿಗಳಿಗೆ | : | 1000 ಮೀಟರ್ ಓಟ | 06 ನಿಮಿಷಗಳ ಅವಧಿಯಲ್ಲಿ ಪೂರ್ಣಗೊಳಿಸಬೇಕು. |

ದೈಹಿಕ ತಾಳ್ವಿಕೆ ಪರೀಕ್ಷೆಯಲ್ಲಿ ಅನರ್ಹರಾದ ಅಭ್ಯರ್ಥಿಗಳನ್ನು ಮುಂದಿನ ಆಯ್ಕೆ ಪ್ರಕ್ರಿಯೆಯಿಂದ ಕೈಬಿಡಲಾಗುವುದು. ದೈಹಿಕ ತಾಳ್ವಿಕೆ ಪರೀಕ್ಷೆಯಲ್ಲಿ ಅರ್ಹರಾಗುವ ಅಭ್ಯರ್ಥಿಗಳನ್ನು ಮಾತ್ರ ಮುಂದಿನ ಹಂತದ ದೈಹಿಕ ಕಾರ್ಯ ಸಮರ್ಥತೆ ಪರೀಕ್ಷೆಗೆ ಪರಿಣಿಸಲಾಗುವುದು.

7.2. **ದೈಹಿಕ ಕಾರ್ಯಸಮರ್ಥತೆ ಪರೀಕ್ಷೆ:**

| **ಕ್ರ. ಸಂ.** | **ಕ್ರೀಡಾ ಚಟುವಟಿಕೆ** | **ಅರ್ಹತಾ ಸಮಯ ಮತ್ತು ಕ್ರಮಿಸಬೇಕಾದ ದೂರ** | |
|---|---|---|---|
| | | **ಪುರುಷ ಅಭ್ಯರ್ಥಿಗಳಿಗೆ** | **ಮಹಿಳಾ ಹಾಗೂ ಮಾಜಿ ಸೈನಿಕ ಅಭ್ಯರ್ಥಿಗಳಿಗೆ** |
| 1 | 100 ಮೀಟರ್ ಓಟ | 15 ಸೆಕೆಂಡುಗಳು | 18.5 ಸೆಕೆಂಡುಗಳು |
| 2 | ಎತ್ತರ ಜಿಗಿತ | 1.20 ಮೀಟರ್ | 0.90 ಮೀಟರ್ |
| 3 | ಉದ್ದ ಜಿಗಿತ | 3.80 ಮೀಟರ್ | 2.50 ಮೀಟರ್ |
| 4 | ಶಾಟ್‌ಪುಟ್<br>ಪುರುಷ: 16 ಎಲ್.ಬಿ.<br>ಮಹಿಳೆ: 8 ಎಲ್.ಬಿ. | 5.60 ಮೀಟರ್ | 3.76 ಮೀಟರ್ |
| 5(ಎ) | 800 ಮೀಟರ್ ಓಟ | 2 ನಿಮಿಷ 50 ಸೆಕೆಂಡುಗಳು | - |
| 5(ಬಿ) | 200 ಮೀಟರ್ ಓಟ | - | 40 ಸೆಕೆಂಡುಗಳು |

***ವಿಶೇಷ ಸೂಚನೆ:***

***i.*** *ಅಭ್ಯರ್ಥಿಗಳು ಮುಂದಿನ ಆಯ್ಕೆ ಪ್ರಕ್ರಿಯೆಗೆ ಅರ್ಹತೆ ಹೊಂದಲು ಈ ಮೇಲಿನ 5 ವಿವಿಧ ದೈಹಿಕ ಕಾರ್ಯ ಸಮರ್ಥತೆ ಪರೀಕ್ಷೆಗಳ ಪೈಕಿ ಕನಿಷ್ಠ 3 ಪರೀಕ್ಷೆಗಳಲ್ಲಿ ಕಡ್ಡಾಯವಾಗಿ ತೇರ್ಗಡೆ ಹೊಂದತಕ್ಕದ್ದು.*

***ii.*** *ದೈಹಿಕ ಕಾರ್ಯ ಸಮರ್ಥತೆ ಪರೀಕ್ಷೆಯಲ್ಲಿ ತೇರ್ಗಡೆಹೊಂದಿದ ಅಭ್ಯರ್ಥಿಗಳನ್ನು ಮಾತ್ರ ಮುಂದಿನ ಆಯ್ಕೆ ಪ್ರಕ್ರಿಯೆಗೆ ಪರಿಗಣಿಸಲಾಗುವುದು. ದೈಹಿಕ ಕಾರ್ಯ ಸಮರ್ಥತೆ ಪರೀಕ್ಷೆಯಲ್ಲಿ ಅನರ್ಹರಾದ ಅಭ್ಯರ್ಥಿಗಳನ್ನು ಮುಂದಿನ ಆಯ್ಕೆ ಪ್ರಕ್ರಿಯೆಯಿಂದ ಕೈಬಿಡಲಾಗುವುದು. ಯಾವುದೇ ಹಂತದಲ್ಲಿ ದೈಹಿಕ ತಾಳ್ವಿಕೆ/ದೈಹಿಕ ಕಾರ್ಯ ಸಮರ್ಥತೆ ಪರೀಕ್ಷೆಯಲ್ಲಿ ಅನರ್ಹರಾದಲ್ಲಿ ಅಥವಾ ಪರೀಕ್ಷೆ ನಡೆಯುವ*

*ಸಮಯದಲ್ಲಿ ಗಾಯಗೊಂಡಲ್ಲಿ ಅಥವಾ ಯಾವುದೇ ಕಾರಣದಿಂದಾಗಿ ಪರೀಕ್ಷೆಯನ್ನು ಅಪೂರ್ಣಗೊಳಿಸಿದ ಅಭ್ಯರ್ಥಿಗಳಿಗೆ ಇನ್ನೊಂದು ಅವಕಾಶ ನೀಡಲಾಗುವುದಿಲ್ಲ.*

*iii.* *ಮಹಿಳಾ ಅಭ್ಯರ್ಥಿಗಳು 12 ವಾರಗಳ ಮೇಲ್ಪಟ್ಟ ಗರ್ಭಿಣಿ ಅಥವಾ 6 ವಾರಗಳ ಕಡಿಮೆ ಬಾಣಂತಿ ಸ್ತ್ರೀಯರಾಗಿದ್ದಲ್ಲಿ ದೈಹಿಕ ತಾಳ್ವಿಕೆ ಮತ್ತು ದೈಹಿಕ ಕಾರ್ಯ ಸಮರ್ಥತೆ ಪರೀಕ್ಷೆಗಳಿಗೆ ತಾತ್ಕಾಲಿಕವಾಗಿ ಅನುಮತಿಸಲಾಗುವುದಿಲ್ಲ. ಅಂತಹ ಮಹಿಳಾ ಅಭ್ಯರ್ಥಿಗಳು* ***ವೈದ್ಯಕೀಯ ಸಕ್ಷಮ ಪ್ರಾಧಿಕಾರವಾದ ಜಿಲ್ಲಾ ಶಸ್ತ್ರಚಿಕಿತ್ಸಕರು/ ಸರ್ಕಾರಿ ವೈದ್ಯರಿಂದ ವೈದ್ಯಕೀಯ ಪ್ರಮಾಣ ಪತ್ರವನ್ನು ಪಡೆದು, ಸಲ್ಲಿಸಿದಲ್ಲಿ*** *ದೈಹಿಕ ತಾಳ್ವಿಕೆ ಮತ್ತು ದೈಹಿಕ ಕಾರ್ಯ ಸಮರ್ಥತೆ ಪರೀಕ್ಷೆಯನ್ನು ನಡೆಸಲಾಗುವುದು.*

## 8. ವೈದ್ಯಕೀಯ ಪರೀಕ್ಷೆ:

### 8.1. ಶಾರೀರಿಕ ಮಾನದಂಡಗಳು

**ಪುರುಷ ಅಭ್ಯರ್ಥಿಗಳು:**

| **ದೇಹದಾರ್ಢ್ಯತೆ** | |
|---|---|
| ಎತ್ತರ: | ಕನಿಷ್ಠ 163 ಸೆ.ಮೀ. |
| ಎದೆ ಸುತ್ತಳತೆ: | ಸಾಮಾನ್ಯ ಸ್ಥಿತಿಯಲ್ಲಿ ಕನಿಷ್ಠ 79 ಸೆ.ಮೀ. |
| ಎದೆ ಕನಿಷ್ಠ ಹಿಗ್ಗುವಿಕೆ: | 5 ಸೆ.ಮೀ. |

**ಮಹಿಳಾ ಅಭ್ಯರ್ಥಿಗಳು:**

| **ದೇಹದಾರ್ಢ್ಯತೆ** | |
|---|---|
| ಎತ್ತರ: | ಕನಿಷ್ಠ 150 ಸೆ.ಮೀ. |
| ಕನಿಷ್ಠತೂಕ: | 40 ಕೆ.ಜಿ. |

### 8.2. ದೃಷ್ಟಿಸಾಮರ್ಥ್ಯ:

**8.2.1.** ಅಭ್ಯರ್ಥಿಗಳು ಈ ಕೆಳಗೆ ನಿಗದಿಪಡಿಸಿರುವ ದೃಷ್ಟಿ ಸಾಮರ್ಥ್ಯವನ್ನು ಕನ್ನಡಕ ಸಹಿತ ಅಥವಾ ಕನ್ನಡಕ ರಹಿತ ಕಡ್ಡಾಯವಾಗಿ ಹೊಂದಿರಬೇಕು ಹಾಗೂ ದೃಷ್ಟಿ ಸಾಮರ್ಥ್ಯ ಕುರಿತು ಈ ಕೆಳಕಂಡ ಪರೀಕ್ಷೆಗಳನ್ನು ನಡೆಸಲಾಗುವುದು.

| **ದೂರ ದೃಷ್ಟಿ(Distant vision)** | | | **ಸಮೀಪ ದೃಷ್ಟಿ(Near vision)** | | |
|---|---|---|---|---|---|
| ದೋಷರಹಿತ ಕಣ್ಣು (Better eye) | ಅಥವಾ | ದೋಷಪೂರಿತ ಕಣ್ಣು (Worse eye) | ದೋಷರಹಿತ ಕಣ್ಣು (Better eye) | ಅಥವಾ | ದೋಷಪೂರಿತ ಕಣ್ಣು (Worse eye) |
| 6/6 ಮೀಟರ್ | | 6/9 ಮೀಟರ್ | 0/6 ಮೀಟರ್ | | 0/8 ಮೀಟರ್ |

**8.2.2. ಕಣ್ಣಿನ ಬಣ್ಣದೃಷ್ಟಿ:**

ಕಣ್ಣಿನ ಬಣ್ಣ ದೃಷ್ಟಿ ಪರೀಕ್ಷೆಯು ಅತ್ಯಗತ್ಯವಾಗಿರುತ್ತದೆ. ಕೆಳಗಿನ ಕೋಷ್ಟಕದಲ್ಲಿ ವಿವರಿಸಿದಂತೆ ಲ್ಯಾಂಟರ್ನ್‌ನಲ್ಲಿನ ದ್ಯುತಿರಂಧ್ರದ ಗಾತ್ರವನ್ನು ಅವಲಂಬಿಸಿ ಬಣ್ಣದ ಗ್ರಹಿಕೆಯನ್ನು ಉನ್ನತ ಮತ್ತು ಕಡಿಮೆ ದರ್ಜೆಗೆ ವರ್ಗೀಕರಿಸಬೇಕು.

| **ವಿವರಗಳು** | **ಉನ್ನತ ದರ್ಜೆಯ ಬಣ್ಣ ಗ್ರಹಿಕೆ** | **ಕಡಿಮೆ ದರ್ಜೆಯ ಬಣ್ಣ ಗ್ರಹಿಕೆ** |
|---|---|---|
| ದೀಪ ಮತ್ತು ಅಭ್ಯರ್ಥಿಯ ನಡುವಿನ ಅಂತರ | 16 ಅಡಿ | 16 ಅಡಿ |
| ದ್ಯುತಿರಂಧ್ರದ ಗಾತ್ರ | 1.3 ಮಿ.ಮೀ | 1.3 ಮಿ.ಮೀ |
| ಮಾನ್ಯತೆ ಸಮಯ | 5 ಸೆಕೆಂಡುಗಳು | 5 ಸೆಕೆಂಡುಗಳು |

***ವಿಶೇಷ ಸೂಚನೆ:***

*i. ವಲಯ ಅರಣ್ಯಾಧಿಕಾರಿ ವೃಂದದ ನೇಮಕಾತಿಗೆ ಕಡಿಮೆ ದರ್ಜೆಯ ಬಣ್ಣ ದೃಷ್ಟಿಯನ್ನು ಪರಿಗಣಿಸಲಾಗುತ್ತದೆ.*

*ii. ಪ್ರತಿ ಕಣ್ಣು ಸಂಪೂರ್ಣ ದೃಷ್ಟಿ ಹೊಂದಿರಬೇಕು. ವರ್ಣಾಂಧತೆ, ಮೆಳ್ಳೆಗಣ್ಣು ಅಥವಾ ಯಾವುದೇ ಕಣ್ಣಿನ ಅಥವಾ ರೆಪ್ಪೆಯ ವಿಕೃತ ಸ್ಥಿತಿಯನ್ನು ಅನರ್ಹತೆ ಎಂದು ಪರಿಗಣಿಸಲಾಗುವುದು.*

**8.2.3. ಶ್ರವಣ ಶಕ್ತಿ:**

ಅಭ್ಯರ್ಥಿಗಳ ಶ್ರವಣ ಶಕ್ತಿಯನ್ನು ಪರೀಕ್ಷಿಸಲು ಈ ಕೆಳಕಂಡ ಪರೀಕ್ಷೆಗಳನ್ನು ನಡೆಸಲಾಗುವುದು.

(1) ರಿನ್ನರ್ ಪರೀಕ್ಷೆ (Rinner's Test);
(2) ವೆಬ್ಬರ್ ಪರೀಕ್ಷೆ (Webber's Test);
(3) ತಲೆತಿರುಗುವಿಕೆಗಾಗಿ ಪರೀಕ್ಷೆ (Tests for Vertigo)

ಮೇಲಿನ ಪರೀಕ್ಷೆಗಳಲ್ಲಿ ಯಾವುದಾದರೂ ಶ್ರವಣ ದೋಷವಿದೆಯೆಂದು ಕಂಡುಬಂದಲ್ಲಿ ಅಂತಹ ಅಭ್ಯರ್ಥಿಗಳು ಆಯ್ಕೆಗೆ ಅನರ್ಹರಾಗುತ್ತಾರೆ.

**8.2.4. ಈ ಕೆಳಕಂಡ ದೈಹಿಕ ನ್ಯೂನತೆಗಳನ್ನು ಹೊಂದಿರುವ ಅಭ್ಯರ್ಥಿಗಳು ಆಯ್ಕೆಗೆ ಅನರ್ಹರು:**

1. ತಾಗು ಮಂಡಿಗಳು (Knock-knees);
2. ಬಾಗಿದ ಕಾಲುಗಳು (Bow legs);
3. ಚಪ್ಪಟೆ ಪಾದ (Flat feet);
4. ನರ ಊತವಿರುವವರು (Varicose veins);

**ವಿಶೇಷ ಸೂಚನೆ:**

**(i)** ಅಭ್ಯರ್ಥಿಯನ್ನು ವೈದ್ಯಕೀಯ ಪರೀಕ್ಷೆಯಲ್ಲಿ ವೈದ್ಯಕೀಯವಾಗಿ ಅನರ್ಹಗೊಳಿಸಿದರೆ**,** ಅಭ್ಯರ್ಥಿಯು ವೈದ್ಯಕೀಯ ಪರೀಕ್ಷೆಯ ಕುರಿತು ಅನರ್ಹಗೊಳಿಸಿದ ದಿನಾಂಕದಿಂದ ಗರಿಷ್ಠ 07 ದಿವಸ ಅಥವಾ ಒಂದು ವಾರದೊಳಗೆ ಆಯ್ಕೆ ಪ್ರಾಧಿಕಾರದ ಮುಂದೆ ಮೇಲ್ಮನವಿ ಸಲ್ಲಿಸಬಹುದಾಗಿರುತ್ತದೆ. ಆಯ್ಕೆ ಪ್ರಾಧಿಕಾರವು ಅಭ್ಯರ್ಥಿಯ ಮೇಲ್ಮನವಿಯ ಕುರಿತು ವೈದ್ಯಕೀಯ ಮಂಡಳಿಯ ಮುಂದೆ ಅಭ್ಯರ್ಥಿಯನ್ನು ವೈದ್ಯಕೀಯ ಪರೀಕ್ಷೆಗೆ ಒಳಪಡಿಸಲಾಗುವುದು. ಈ ಮೇಲ್ಮನವಿಯ ಕುರಿತು ವೈದ್ಯಕೀಯ ಮಂಡಳಿಯು ನೀಡುವ ವೈದ್ಯಕೀಯ ವರದಿಯೇ ಅಂತಿಮವಾಗಿರುತ್ತದೆ.

**(ii)** ದೈಹಿಕ ತಾಳ್ವಿಕೆ, ದೈಹಿಕ ಕಾರ್ಯಸಮರ್ಥತೆ ಮತ್ತು ವೈದ್ಯಕೀಯ ಪರೀಕ್ಷೆಗಳಲ್ಲಿ ಅರ್ಹತೆ ಪಡೆದ ಅಭ್ಯರ್ಥಿಗಳನ್ನು ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಪಡೆದ ಅಂಕಗಳ ಮೆರಿಟ್ ಆಧಾರದ ಮೇಲೆ ಮತ್ತು ಪ್ರಚಲಿತ ಚಾಲ್ತಿಯಲ್ಲಿರುವ ವೃಂದ ಮತ್ತು ನೇಮಕಾತಿ ನಿಯಮ ಹಾಗೂ ಮೀಸಲಾತಿ ನಿಯಮಗಳನುಸಾರ ಅಧಿಸೂಚನೆಯಲ್ಲಿ ಅಧಿಸೂಚಿಸಿರುವ ಪ್ರವರ್ಗವಾರು ಖಾಲಿ ಹುದ್ದೆಗಳಿಗೆ 1:1 (ಹುದ್ದೆ:ಅಭ್ಯರ್ಥಿ) ಅನುಪಾತದಲ್ಲಿ ಅಭ್ಯರ್ಥಿಗಳನ್ನು ವಲಯ ಅರಣ್ಯಾಧಿಕಾರಿ ವೃಂದದ ಹುದ್ದೆಗೆ ಆಯ್ಕೆ ಮಾಡಲಾಗುವುದು.

**9. ಇತರೆ ಸೂಚನೆಗಳು:**

9.1. ಅಭ್ಯರ್ಥಿಗಳು ನೇಮಕಾತಿಯ ಎಲ್ಲಾ ಪರೀಕ್ಷೆಗಳಿಗೆ ತಮ್ಮ ಸ್ವಂತ ಖರ್ಚಿನಲ್ಲಿ ಹಾಜರಾಗಬೇಕು ಹಾಗೂ ಈ ಎಲ್ಲಾ ಪರೀಕ್ಷೆಗಳು ಒಂದಕ್ಕಿಂತ ಹೆಚ್ಚಿನ ದಿನ ನಡೆಯುವುದರಿಂದ ಈ ಬಗ್ಗೆ ಎಲ್ಲಾ ಪೂರ್ವಸಿದ್ಧತೆ ಹಾಗೂ ತಂಗುವಿಕೆ ಬಗ್ಗೆ ಅಭ್ಯರ್ಥಿಯು ತನ್ನ ಸ್ವಂತ ಖರ್ಚಿನಲ್ಲಿ ವ್ಯವಸ್ಥೆ ಮಾಡಿಕೊಳ್ಳತಕ್ಕದ್ದು.

9.2. ವಲಯ ಅರಣ್ಯಾಧಿಕಾರಿ ಹುದ್ದೆಗೆ ಆಯ್ಕೆಯಾದ ಅಭ್ಯರ್ಥಿಗಳನ್ನು ಅರಣ್ಯ ಇಲಾಖೆಯಲ್ಲಿ ರೂ. 40900 – 1100 – 46400 – 1250 – 53900 -1450 – 62600 – 1650 – 72500 – 1900 – 78200 ವೇತನ ಶ್ರೇಣಿಯಲ್ಲಿ ಮೂರು ವರ್ಷಗಳ ಪರೀಕ್ಷಾರ್ಥ ಅವಧಿಯ ಮೇಲೆ ವಲಯ ಅರಣ್ಯಾಧಿಕಾರಿಯನ್ನಾಗಿ ನೇಮಕಾತಿ ಪ್ರಾಧಿಕಾರದಿಂದ ನೇಮಕಾತಿ ಆದೇಶ ನೀಡಲಾಗುವುದು ಮತ್ತು ಅವರನ್ನು ಭಾರತ ಸರ್ಕಾರದ ನಿಯಂತ್ರಣದಲ್ಲಿರುವ

ಯಾವುದಾದರೂ ವಲಯ ಅರಣ್ಯಾಧಿಕಾರಿ ಹುದ್ದೆಯ ತರಬೇತಿ ಕೇಂದ್ರಕ್ಕೆ 18 ತಿಂಗಳ ವೃತ್ತಿ ಬುನಾದಿ ತರಬೇತಿಗೆ ನಿಯೋಜಿಸಲಾಗುವುದು.

9.3. ವಲಯ ಅರಣ್ಯಾಧಿಕಾರಿಯಾಗಿ ನೇಮಕಗೊಂಡ ನಂತರ ಸದರಿ ಅಭ್ಯರ್ಥಿಯು ತರಬೇತಿಗೆ ಹಾಜರಾಗುವ ಮೊದಲು ನೇಮಕಾತಿ ಪ್ರಾಧಿಕಾರದ ಸಮಕ್ಷಮ ರೂ. 1,00,000/- (ಒಂದು ಲಕ್ಷ ರೂಪಾಯಿಗಳು) ಸಾಲ್ವೆಂಟ್ ಶೂರಿಟಿ ಹೊಂದಿರುವ ಇಬ್ಬರು ಅಥವಾ ರೂ. 40,900/- (ನಲವತ್ತು ಸಾವಿರದ ಒಂಬತ್ತು ನೂರು ರೂಪಾಯಿಗಳು) ಗಿಂತ ಹೆಚ್ಚು ಮಾಸಿಕ ವೇತನ ಪಡೆಯುತ್ತಿರುವ ಮತ್ತು ತರಬೇತಿ ಮುಗಿಯುವ ದಿನಾಂಕದಿಂದ ಕನಿಷ್ಠ 6 ವರ್ಷ ಸೇವಾವಧಿ ಬಾಕಿ ಉಳಿದಿರುವ ಇಬ್ಬರು ಸರ್ಕಾರಿ ನೌಕರರ ಜಾಮೀನು ಕೊಡಬೇಕು. ಇದು ಸಾಧ್ಯವಾಗದಿದ್ದ ಪಕ್ಷದಲ್ಲಿ ಅಭ್ಯರ್ಥಿಯು ರೂ. 1,00,000/- (ಒಂದು ಲಕ್ಷ ರೂಪಾಯಿಗಳು) ಮೊತ್ತದ ರಾಷ್ಟ್ರೀಯ ಉಳಿತಾಯ ಸರ್ಟಿಫಿಕೇಟನ್ನು ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಅರಣ್ಯ ಪಡೆ ಮುಖ್ಯಸ್ಥರು), ಬೆಂಗಳೂರು ಇವರ ಹೆಸರಿಗೆ ಅಡವು ಇರಿಸಬಹುದು. ಅಭ್ಯರ್ಥಿಯು ಇಲಾಖೆಯಲ್ಲಿ ನೇಮಕಾತಿಯಾದ ದಿನಾಂಕದಿಂದ ಕನಿಷ್ಠ 5 ವರ್ಷ ಸೇವೆ ಸಲ್ಲಿಸುವುದಾಗಿ, ತಪ್ಪಿದಲ್ಲಿ ಸರ್ಕಾರವು ತರಬೇತಿಯ ಬಗ್ಗೆ ಭರಿಸಿದ ಸಂಪೂರ್ಣ ವೆಚ್ಚವನ್ನು ಮತ್ತು ತರಬೇತಿ ಅವಧಿಯಲ್ಲಿ ಪಡೆದ ವೇತನವನ್ನು ಶೇ.8 ರ ದಂಡನೆ ಬಡ್ಡಿಯೊಂದಿಗೆ ಸರ್ಕಾರಕ್ಕೆ ಪಾವತಿ ಮಾಡಲು ಮತ್ತು ಆಯ್ಕೆ ಪ್ರಾಧಿಕಾರ ನಿಗದಿಪಡಿಸುವ ಇತರೆ ಷರತ್ತುಗಳನ್ನು ಪೂರೈಸಲು ಸಿದ್ಧವಿರುವುದಾಗಿ, ಕರ್ನಾಟಕ ರಾಜ್ಯದ ಯಾವುದೇ ಭಾಗದಲ್ಲಿ, ಅಲ್ಲದೆ ಸರ್ಕಾರವು ಸೂಚಿಸಿದ ಯಾವುದೇ ಸ್ಥಳದಲ್ಲಿ ಕರ್ತವ್ಯ ನಿರ್ವಹಿಸಲು ಸಿದ್ಧವಿರುವುದಾಗಿ ಛಾಪಾಕಾಗದದಲ್ಲಿ ನಿಗದಿತ ನಮೂನೆಯಲ್ಲಿ ಅಭ್ಯರ್ಥಿಯು ಕರಾರು ಪತ್ರವನ್ನು ಬರೆದು ಕೊಡತಕ್ಕದ್ದು.

9.4. ಒಂದು ವೇಳೆ ಅಭ್ಯರ್ಥಿಯು ಸೂಕ್ತ ಕಾರಣಗಳನ್ನು ಹೊರತುಪಡಿಸಿ (ಕಾರಣದ ಸೂಕ್ತತೆ ಬಗ್ಗೆ ಆಯ್ಕೆ ಪ್ರಾಧಿಕಾರದ ನಿರ್ಣಯವೇ ಅಂತಿಮವಾಗುತ್ತದೆ) ಷರತ್ತುಗಳನ್ನು ಪೂರೈಸಲು ವಿಫಲವಾದಲ್ಲಿ **ಅಥವಾ** ತರಬೇತಿಯನ್ನು ಯಶಸ್ವಿಯಾಗಿ ಪೂರೈಸಿ ಪರೀಕ್ಷೆಗಳಲ್ಲಿ ಉತ್ತೀರ್ಣರಾಗಲು ವಿಫಲರಾದಲ್ಲಿ **ಅಥವಾ** ಯಾವುದೇ ಕಾರಣಕ್ಕಾಗಿ ತರಬೇತಿಯಿಂದ ತೆಗೆದುಹಾಕಲ್ಪಟ್ಟರೆ **ಅಥವಾ** ಸ್ವಇಚ್ಛೆಯಿಂದ ತರಬೇತಿ ಮಧ್ಯದಲ್ಲಿ ಬಿಟ್ಟು ಬಿಟ್ಟರೆ **ಅಥವಾ** ಪರೀಕ್ಷಾರ್ಥ ಅವಧಿಯನ್ನು ಯಶಸ್ವಿಯಾಗಿ ಪೂರೈಸದಿದ್ದರೆ ಸರ್ಕಾರವು ಅಭ್ಯರ್ಥಿಯ ತರಬೇತಿಗಾಗಿ ಭರಿಸಿದ ವೆಚ್ಚವನ್ನು ಮತ್ತು ತರಬೇತಿ ಅವಧಿಯಲ್ಲಿ ಪಡೆದ ವೇತನವನ್ನು ಮೇಲೆ ನಿಗದಿಪಡಿಸಿದ ದರದಲ್ಲಿ ಬಡ್ಡಿಯೊಂದಿಗೆ ಮರುಪಾವತಿಸಲು ಅಭ್ಯರ್ಥಿ ಮತ್ತು ಜಾಮೀನುದಾರರು ಒಟ್ಟಾಗಿಯೂ ಅಥವಾ ಪ್ರತ್ಯೇಕವಾಗಿಯೂ ಭರಿಸಲು ಬದ್ಧರಾಗಿರತಕ್ಕದ್ದು. ಅಂತಹ ಹಣವನ್ನು ಇವರೆಲ್ಲರಿಂದ ಒಟ್ಟಾರೆಯಾಗಿ ಅಥವಾ ಪ್ರತಿಯೊಬ್ಬರಿಂದ ಪ್ರತ್ಯೇಕವಾಗಿ ವಸೂಲು ಮಾಡುವ ಹಕ್ಕನ್ನು ಆಯ್ಕೆ ಪ್ರಾಧಿಕಾರವು ಹೊಂದಿರುತ್ತದೆ.

9.5. ಅಭ್ಯರ್ಥಿಗಳ ತರಬೇತಿಯ ಸಂಪೂರ್ಣ ವೆಚ್ಚವನ್ನು ಕರ್ನಾಟಕ ರಾಜ್ಯ ಸರ್ಕಾರವು ಭರಿಸುತ್ತದೆ. ಆದರೆ ಸಾಧನ ಸಾಮಗ್ರಿಗಳ ಭತ್ಯೆ ರೂ. 50,000/-ದ ಶೇ. 50 ಅಂದರೆ ರೂ. 25,000/-ನ್ನು ಅಭ್ಯರ್ಥಿಗಳು ತರಬೇತಿ ಪೂರ್ಣಗೊಳಿಸಿ ಬಂದ ನಂತರ ಇಲಾಖೆಯಲ್ಲಿ ನಿಯುಕ್ತಿಗೊಂಡ ದಿನಾಂಕದಿಂದ ಪಡೆಯುವ ವೇತನದಿಂದ ಆರಂಭಗೊಂಡು ಒಟ್ಟು 10 ಸಮಾನ ಮಾಸಿಕ ಕಂತುಗಳಲ್ಲಿ ವಸೂಲು ಮಾಡಲಾಗುವುದು. ಮೇಲಿನ ಸಾಧನ ಸಾಮಗ್ರಿ ಭತ್ಯೆಯು ತಾತ್ಕಾಲಿಕವಾಗಿದ್ದು ಇದು ಪರಿಷ್ಕರಣೆಗೆ ಒಳಪಟ್ಟಿರುತ್ತದೆ.

9.6. ವೃತ್ತಿ ಬುನಾದಿ ತರಬೇತಿಯನ್ನು ಯಶಸ್ವಿಯಾಗಿ ಪೂರೈಸಿದ ನಂತರ ಪರೀಕ್ಷಾರ್ಥ ವಲಯ ಅರಣ್ಯಾಧಿಕಾರಿಗಳನ್ನು 6 ತಿಂಗಳ ಅವಧಿಗೆ ಕ್ಷೇತ್ರ ಮಟ್ಟದ ವೃತ್ತಿ ತರಬೇತಿಗಾಗಿ ನಿಯೋಜಿಸಲಾಗುವುದು. ಉಳಿದ ಒಂದು ವರ್ಷದ ಪರೀಕ್ಷಾರ್ಥ ಅವಧಿಯಲ್ಲಿ ವಲಯ ಅರಣ್ಯಾಧಿಕಾರಿಗಳಾಗಿ ಸ್ವತಂತ್ರವಾಗಿ ಕರ್ತವ್ಯ ನಿರ್ವಹಿಸತಕ್ಕದ್ದು.

9.7. ವೃತ್ತಿ ಬುನಾದಿ ತರಬೇತಿಯ ಸಮಯದಲ್ಲಿ ಅಭ್ಯರ್ಥಿಗಳು ವಲಯ ಅರಣ್ಯಾಧಿಕಾರಿ ಹುದ್ದೆಯ ವೇತನವನ್ನು ಪಡೆಯಲು ಅರ್ಹರಾಗಿರುತ್ತಾರೆ.

**10. ವಿವಿಧ ಪ್ರವರ್ಗಗಳ ಅಡಿ ಮೀಸಲಾತಿ ಕೋರುವ ಅಭ್ಯರ್ಥಿಗಳು ಸಲ್ಲಿಸಬೇಕಾದ ದಾಖಲೆ/ಪ್ರಮಾಣ ಪತ್ರಗಳವಿವರ ಈ ಕೆಳಕಂಡಂತಿದೆ:**

10.1. ಜನ್ಮ ದಿನಾಂಕದ ದೃಢೀಕರಣದ ಕುರಿತು ಕರ್ನಾಟಕ ಪ್ರೌಢ ಶಿಕ್ಷಣ ಮಂಡಳಿ/ ಸಿ.ಬಿ.ಎಸ್.ಇ./ಐ.ಸಿ.ಎಸ್.ಇ. ಮಂಡಳಿಯು ನಡೆಸುವ 10ನೇ ತರಗತಿಯ ಪರೀಕ್ಷೆಯ ಅಂಕಪಟ್ಟಿ.

10.2. ಶೈಕ್ಷಣಿಕ ವಿದ್ಯಾರ್ಹತೆಗೆ ಸಂಬಂಧಿಸಿದ ಅಂಕಪಟ್ಟಿಗಳು.

10.3. ಜಾತಿ ಮೀಸಲಾತಿ ಕೋರುವ ಎಲ್ಲಾ ಅಭ್ಯರ್ಥಿಗಳು ಸಂಬಂಧಿಸಿದ ಪ್ರಮಾಣ ಪತ್ರಗಳನ್ನು ಅರ್ಜಿ ಸಲ್ಲಿಸಲು ನಿಗದಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರುವಂತೆ ಪಡೆದಿಟ್ಟುಕೊಂಡಿರಬೇಕು. ಮೀಸಲಾತಿ ಪ್ರಮಾಣ ಪತ್ರಗಳನ್ನು ಸಲ್ಲಿಸಬೇಕಾದ ನಮೂನೆಗಳು:

| | |
|---|---|
| ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದ ಅಭ್ಯರ್ಥಿಗಳು | ನಮೂನೆ 'ಡಿ' |
| ಪ್ರವರ್ಗ - I ಕ್ಕೆ ಸೇರಿದ ಅಭ್ಯರ್ಥಿಗಳು | ನಮೂನೆ 'ಇ' |
| ಪ್ರವರ್ಗ – IIಎ, IIಬಿ, IIIಎ ಮತ್ತು IIIಬಿ ಮೀಸಲಾತಿಗೆ ಸೇರಿದ ಅಭ್ಯರ್ಥಿಗಳು | ನಮೂನೆ 'ಎಫ್' |

ಹಿಂದುಳಿದ ವರ್ಗಗಳ ಪ್ರವರ್ಗ – IIಎ, IIಬಿ, IIIಎ ಮತ್ತು IIIಬಿ ಮೀಸಲಾತಿ ಪ್ರಮಾಣ ಪತ್ರಗಳು 05 ವರ್ಷ ಚಾಲ್ತಿರುತ್ತವೆ (Government Notification No. SWD 155 BCA 2012 Dt: 17.02.2012 ರನ್ವಯ) ಅಭ್ಯರ್ಥಿಗಳು ಪಡೆದಿರುವ ಪ್ರಮಾಣ ಪತ್ರವು ಅರ್ಜಿ ಸಲ್ಲಿಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರತಕ್ಕದ್ದು.

ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಪ್ರವರ್ಗ – I ರ ಅಭ್ಯರ್ಥಿಗಳು ಪಡೆದಿರುವ / ಪಡೆಯುವ ಪ್ರಮಾಣ ಪತ್ರಗಳು ಜೀವಿತ ಅವಧಿಯವರೆವಿಗೆ ಅಥವಾ ರದ್ದು ಮಾಡುವವರೆವಿಗೆ ಸಿಂಧುತ್ವವನ್ನು ಹೊಂದಿದ್ದು, ಇಂತಹ ಪ್ರಮಾಣ ಪತ್ರಗಳನ್ನು ದಿನಾಂಕದ ಮಿತಿಯಿಲ್ಲದೆ ಪರಿಗಣಿಸಲಾಗುವುದು. (ಸರ್ಕಾರದ ಸುತ್ತೋಲೆ ಸಂಖ್ಯೆ: SWD 155 BCA 2011 Dt. 22.02.2012).

10.4. **ಗ್ರಾಮೀಣ ಅಭ್ಯರ್ಥಿಗಳಿಗೆ ಮೀಸಲಾತಿ:**
ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 8 ಸೇನೆನಿ 2001 ದಿನಾಂಕ: 13.02.2001ರನ್ವಯ ಗ್ರಾಮೀಣ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಪ್ರಸ್ತುತ ಚಾಲ್ತಿಯಲ್ಲಿರುವ ನಿಯಮಗಳ ರೀತ್ಯ 1 ರಿಂದ 10ನೇ ತರಗತಿಯವರೆಗೆ ಗ್ರಾಮೀಣ ಮೀಸಲಾತಿಗೆ ಒಳಪಡುವ ಪ್ರದೇಶಗಳಲ್ಲಿ ವ್ಯಾಸಂಗ ಮಾಡಿ, ಉತ್ತೀರ್ಣರಾಗಿರುವವರು ಈ ಮೀಸಲಾತಿಯನ್ನು ಪಡೆಯಲು ಅರ್ಹರು.

ಗ್ರಾಮೀಣ ಅಭ್ಯರ್ಥಿಗಳಿಗೆಂದು ಮೀಸಲಿರಿಸಿದ ಹುದ್ದೆಳನ್ನು ಕ್ಲೇಮ್ ಮಾಡುವ ಸಾಮಾನ್ಯ ಅರ್ಹತೆಯ ಅಭ್ಯರ್ಥಿಗಳು ನಮೂನೆ-2 ನ್ನು ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಯವರ ಮೇಲು ರುಜುವಿನೊಂದಿಗೆ ಹಾಗೂ **ಈ ಪ್ರಮಾಣ ಪತ್ರವಲ್ಲದೇ ಮೇಲುಸ್ತರಕ್ಕೆ (Creamy layer) ಸೇರಿಲ್ಲದಿರುವ ಬಗ್ಗೆ ನಮೂನೆ-1 ರಲ್ಲಿ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಸಂಬಂಧಿತ ತಹಶೀಲ್ದಾರ್ ರವರಿಂದ ಪಡೆದಿಟ್ಟುಕೊಂಡಿರತಕ್ಕದ್ದು. ಅಭ್ಯರ್ಥಿಗಳು ನಮೂನೆ-1 ರಲ್ಲಿ ಪಡೆದಿರುವ ಪ್ರಮಾಣ ಪತ್ರವು ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರತಕ್ಕದ್ದು.**

ಅಂತೆಯೇ, ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-I, IIಎ, IIಬಿ, IIIಎ ಮತ್ತು IIIಬಿ ಮೀಸಲಾತಿಗೆ ಸೇರಿದ ಅಭ್ಯರ್ಥಿಗಳು ಕಡ್ಡಾಯವಾಗಿ ಗ್ರಾಮೀಣ ಮೀಸಲಾತಿಯ ಪ್ರಮಾಣ ಪತ್ರವನ್ನು ನಮೂನೆ-2 ರಲ್ಲಿ ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಯವರ ಮೇಲು ರುಜು, ಮೊಹರು ಮತ್ತು ಜಾರಿ ಮಾಡಿದ ದಿನಾಂಕದೊಂದಿಗೆ ನಿಗಧಿತ ನಮೂನೆಯಲ್ಲಿ ಪಡೆದಿಟ್ಟುಕೊಂಡಿರತಕ್ಕದ್ದು. **ತಪ್ಪಿದ್ದಲ್ಲಿ, ಅಂತಹ ಅಭ್ಯರ್ಥಿಗಳ ಮೀಸಲಾತಿಯನ್ನು ರದ್ದುಪಡಿಸಲಾಗುವುದು ಹಾಗೂ ಅಂತಹವರು ಗ್ರಾಮೀಣ ಮೀಸಲಾತಿಗೆ ಅನರ್ಹರಾಗಿರುತ್ತಾರೆ.**

**ಜಾತಿ ಹಾಗೂ ಗ್ರಾಮೀಣ ಮೀಸಲಾತಿ ಕೋರಿರುವ ಅಭ್ಯರ್ಥಿಗಳ ಜಾತಿ ಮೀಸಲಾತಿ ಪ್ರಮಾಣ ಪತ್ರಗಳು ಅಸಿಂಧುವಾದಲ್ಲಿ ಅಂತಹವರು ಗ್ರಾಮೀಣ ಮೀಸಲಾತಿಗೂ ಸಹ ಅನರ್ಹರಾಗಿರುತ್ತಾರೆ.**

10.5. **ಕನ್ನಡ ಮಾಧ್ಯಮ ಅಭ್ಯರ್ಥಿಗಳಿಗೆ ಮೀಸಲಾತಿ:**

ಸರ್ಕಾರಿ ಅಧಿಸೂಚನೆ ಸಂಖ್ಯೆ: ಸಿಆಸುಇ 71 ಸೇನೆನಿ 2001 ದಿನಾಂಕ: 24.10.2002ರನ್ವಯ ಕನ್ನಡ ಮಾಧ್ಯಮದ ಅಭ್ಯರ್ಥಿಗಳಿಗೆಂದು ಮೀಸಲಿರಿಸಿದ ಹುದ್ದೆಗಳನ್ನು ಕ್ಲೇಮ್ ಮಾಡುವ ಅಭ್ಯರ್ಥಿಗಳು **1 ರಿಂದ 10ನೇ ತರಗತಿಯವರೆಗೆ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುವ ಬಗ್ಗೆ ಸಂಬಂಧಪಟ್ಟ ಶಾಲಾ ಮುಖ್ಯೋಪಧ್ಯಾಯರ ಸಹಿ, ಮೊಹರು ಮತ್ತು ಜಾರಿ ಮಾಡಿದ ದಿನಾಂಕದೊಂದಿಗೆ ನಿಗಧಿತ ನಮೂನೆಯಲ್ಲಿ ಪಡೆದಿಟ್ಟುಕೊಂಡಿರತಕ್ಕದ್ದು.**

10.6. **ಮಾಜಿ ಸೈನಿಕರಿಗೆ ಮೀಸಲಾತಿ:**

(1) ಮಾಜಿ ಸೈನಿಕ ಎಂದರೆ ಸಶಸ್ತ್ರ ದಳಗಳಾದ ನಿಯಮಿತ ಭೂದಳ, ನೌಕಾದಳ ಮತ್ತು ವಾಯು ದಳದಲ್ಲಿ ಯಾವುದೇ ಶ್ರೇಣಿಯಲ್ಲಿ (ಯೋಧ ಅಥವಾ ಯೋಧನಾಗಿಲ್ಲದೇ) ಸೇವೆ ಸಲ್ಲಿಸಿರುವ ವ್ಯಕ್ತಿ ಎಂದು ಅರ್ಥ. ಅಂದರೆ, ಡಿಫೆನ್ಸ್ ಸೆಕ್ಯುರಿಟಿ ಕೋರ್, ಜನರಲ್ ರಿಸರ್ವ್ ಇಂಜಿನಿಯರಿಂಗ್ ಫೋರ್ಸ್, ಲೋಕ ಸಹಾಯಕ ಸೇನಾ ಮತ್ತು ಪ್ಯಾರಾ ಮಿಲಿಟರಿ ದಳಗಳಲ್ಲಿ ಸೇವೆ ಸಲ್ಲಿಸಿದ ವ್ಯಕ್ತಿ ಸೇರ್ಪಡೆಯಾಗುವುದಿಲ್ಲ ಮತ್ತು

(ಅ) ಅಂತಹ ಸೇವೆಯಿಂದ ನಿವೃತ್ತಿ ಹೊಂದಿದ ನಂತರ ನಿವೃತ್ತಿ ವೇತನ ಪಡೆಯುತ್ತಿರುವ

**ಅಥವಾ**

(ಆ) ವೈದ್ಯಕೀಯ ಕಾರಣಗಳಿಂದ ಮಿಲಿಟರಿ ಸೇವೆಯಿಂದ ಬಿಡುಗಡೆಯಾದ ಅಥವಾ ವ್ಯಕ್ತಿಯ ಹಿಡಿತಕ್ಕೂ ಮೀರಿದ ಪರಿಸ್ಥಿತಿಗಳಿಂದ ಮತ್ತು ವೈದ್ಯಕೀಯ ಅಥವಾ ಅಸಾಮರ್ಥ್ಯದ ಪಿಂಚಣಿ ಪಡೆದು ಅಂತಹ ಸೇವೆಯಲ್ಲಿ ಬಿಡುಗಡೆಯಾದವನು

**ಅಥವಾ**

(ಇ) ಸ್ವಂತ ಕೋರಿಕೆ ಹೊರತುಪಡಿಸಿ, ಸಿಬ್ಬಂದಿ ಕಡಿತದ ಪರಿಣಾಮದಿಂದ ಅಂತಹ ಸೇವೆಯಿಂದ ಬಿಡುಗಡೆ ಹೊಂದಿದ ವ್ಯಕ್ತಿ

**ಅಥವಾ**

(ಈ) ತನ್ನ ಸ್ವಂತ ಕೋರಕೆ ಮೇರೆಗೆ ಅಥವಾ ದುರ್ನಡತೆ ಅಥವಾ ಅಸಾಮರ್ಥ್ಯ ಕಾರಣದಿಂದಾಗಿ ತೆಗೆದುಹಾಕಿರುವ ಅಥವಾ ಕರ್ತವ್ಯದಿಂದ ವಜಾ ಮಾಡಿದ ವ್ಯಕ್ತಿಗಳನ್ನು ಹೊರತುಪಡಿಸಿ, ನಿರ್ದಿಷ್ಟ ಅಧಿಯನ್ನು ಪೂರೈಸಿದ ತರುವಾಯ ಬಿಡುಗಡೆ ಹೊಂದಿದ ವ್ಯಕ್ತಿ ಮತ್ತು ಗ್ರಾಚ್ಯುಟಿ ಪಡೆಯುತ್ತಿರುವ ವ್ಯಕ್ತಿ ಮತ್ತು ಪ್ರಾಂತೀಯ ಸೇವೆಯ ಈ ಕೆಳಗೆ ಹೆಸರಿಸಿದ ವರ್ಗದ ಸಿಬ್ಬಂದಿಯವರು.

(i) ನಿರಂತರ ಸೇವೆ ಸಲ್ಲಿಸಿ ನಿವೃತ್ತಿ ಹೊಂದಿದ ಪಿಂಚಣಿದಾರರು

(ii) ಮಿಲಿಟರಿ ಸೇವೆಯಿಂದಾಗಿ ಉಂಟಾದ ದೈಹಿಕ ಅಸಾಮರ್ಥ್ಯತೆ ಹೊಂದಿ ಬಿಡುಗಡೆಯಾದ ವ್ಯಕ್ತಿ,

(iii) ಗ್ಯಾಲಂಟ್ರಿ ಪ್ರಶಸ್ತಿ ವಿಜೇತರು

**ವಿವರಣೆ:** ಕೇಂದ್ರ ಸಶಸ್ತ್ರ ದಳದ ಸೇವೆಯಲ್ಲಿ ವ್ಯಕ್ತಿಗಳು ಸೇವೆಯಿಂದ ನಿವೃತ್ತಿ ಹೊಂದಿದ ನಂತರ ಮಾಜಿ ಸೈನಿಕರ ವರ್ಗದಡಿ ಬರುವ ವ್ಯಕ್ತಿಗೆ ಒಪ್ಪಂದವು ಪೂರ್ಣವಾಗಲು ಒಂದು ವರ್ಷಕ್ಕೆ ಮುನ್ನ ಉದ್ಯೋಗಕ್ಕೆ ಅರ್ಜಿ ಹಾಕಿಕೊಳ್ಳಲು ಹಾಗೂ ಅವರಿಗೆ ಮಾಜಿ ಸೈನಿಕರಿಗೆ ದೊರೆಯುವ ಎಲ್ಲಾ ಸೌಲಭ್ಯಗಳನ್ನು ಹೊಂದಲು ಅನುಮತಿ ನೀಡಲಾಗಿದೆ. ಆದರೆ ಸಮವಸ್ತ್ರವನ್ನು ತ್ಯಜಿಸಲು ಅನುಮತಿ ನೀಡುವವರಿಗೆ ರಾಜ್ಯ ನಾಗರೀಕ ಸೇವೆ ಅಥವಾ ಹುದ್ದೆಳಿಗೆ ನೇಮಕ ಹೊಂದುವಂತಿಲ್ಲ.

ಸೈನಿಕರ ಸೇವಾ ಒಪ್ಪಂದವನ್ನು ಮುಕ್ತಾಯಕ್ಕೆ ಮುನ್ನ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಅವರ ಮೇಲಾಧಿಕಾರಿಗಳಿಂದ ನಿರಾಕ್ಷೇಪಣಾ ಪ್ರಮಾಣ ಪತ್ರವನ್ನು ಪಡೆದು ಅದರ ಮೂಲ ಪ್ರತಿಯನ್ನು ಕಡ್ಡಾಯವಾಗಿ ಹಾಜರುಪಡಿಸಬೇಕು.

(2) ಕೇಂದ್ರ ಸಶಸ್ತ್ರ ದಳಗಳಲ್ಲಿ ಸೇವೆ ಸಲ್ಲಿಸುವಾಗ ಯುದ್ದ ಅಥವಾ ಯುದ್ದದಂತಹ ಕಾರ್ಯಾಚರಣೆಯಲ್ಲಿ ಮಡಿದ ಅಥವಾ ಅಂಗವಿಕಲತೆ ಹೊಂದಿದ ವ್ಯಕ್ತಿಗಳ

ಕುಟುಂಬದವರು (ಸಂದರ್ಭಾನುಸಾರ ಹೆಂಡತಿ ಅಥವಾ ಗಂಡ ಮತ್ತು ಮಕ್ಕಳು ಮತ್ತು ಮಲಮಕ್ಕಳು) ಮಾಜಿ ಸೈನಿಕ ಮೀಸಲಾತಿಗೆ ಅರ್ಹರಾಗಿರುತ್ತಾರೆ. ಆದರೆ, ಅಂತಹವರುಗಳಿಗೆ ವಯೋಮಿತಿ ಸಡಿಲಿಕೆಯನ್ನು ನೀಡಲಾಗುವುದಿಲ್ಲ.

(3) ಸೇನೆಯಿಂದ ಬಿಡುಗಡೆಯಾದ ವ್ಯಕ್ತಿಗಳು ಅವರ ಬಿಡುಗಡೆ ಪ್ರಮಾಣ ಪತ್ರವನ್ನು (ಗುರುತಿನ ಚೀಟಿ, ನಿವೃತ್ತಿ ವೇತನ ಸಂದಾಯದ ಪತ್ರ, ಬಿಡುಗಡೆ ಪುಸ್ತಕ ಮತ್ತು ಪದವಿ ಪ್ರಮಾಣ ಪತ್ರ) /ಮಾಜಿ ಸೈನಿಕರ ಅವಲಂಬಿತರು ಮಾಜಿ ಸೈನಿಕರು ಸೇವೆಯಲ್ಲಿದ್ದಾಗ ಯುದ್ಧ / ಯುದ್ಧದಂತಹ ಕಾರ್ಯಾಚರಣೆಯಲ್ಲಿ ಮಡಿದ ಅಥವಾ ಶಾಶ್ವತ ಅಂಗವಿಕಲತೆ ಹೊಂದಿದ ಬಗ್ಗೆ ಪ್ರಮಾಣ ಪತ್ರವನ್ನು ಪಡೆದಿಟ್ಟುಕೊಂಡಿರತಕ್ಕದ್ದು.

10.7. ಯೋಜನಾ ನಿರಾಶ್ರಿತರಾದ ಕುಟುಂಬದ ಅಭ್ಯರ್ಥಿಯು ಸಂಬಂಧಪಟ್ಟ ತಹಶೀಲ್ದಾರ್‌ರವರಿಂದ ನಮೂನೆ-3ರಲ್ಲಿ ನೀಡಿರುವ ಪ್ರಮಾಣ ಪತ್ರವನ್ನು ಪಡೆದಿರಬೇಕು.

10.8. **ಕಲ್ಯಾಣ ಕರ್ನಾಟಕ ಮೀಸಲಾತಿ ಕೋರುವ ಅಭ್ಯರ್ಥಿಗಳು ಕರ್ನಾಟಕ ಸಾರ್ವಜನಿಕ ಉದ್ಯೋಗ (ಹೈದರಾಬಾದ್ – ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) (ಅರ್ಹತಾ ಪ್ರಮಾಣ ಪತ್ರಗಳ ನೀಡಿಕೆ) ನಿಯಮಗಳು 2013** ಕ್ಕೆ ಸಂಬಂಧಿಸಿದಂತೆ ನೇರ ನೇಮಕಾತಿಯಲ್ಲಿ ಸ್ಥಳೀಯ ವ್ಯಕ್ತಿ ಎಂಬ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು **ನಮೂನೆ-ಎ ಯಲ್ಲಿಯೇ ಅರ್ಹತಾ ಪ್ರಮಾಣ ಪತ್ರವನ್ನು ಸಕ್ಷಮ ಪ್ರಾಧಿಕಾರವಾದ ಸಂಬಂಧಪಟ್ಟ ಉಪ ವಿಭಾಗದ ಸಹಾಯಕ ಆಯುಕ್ತರಿಂದ ಪಡೆದಿಟ್ಟುಕೊಳ್ಳತಕ್ಕದ್ದು.** ಮೂಲ ದಾಖಲಾತಿಗಳ ಪರಿಶೀಲನಾ ಸಮಯದಲ್ಲಿ ಈ ಪ್ರಮಾಣ ಪತ್ರದ ಮೂಲ ಪ್ರತಿಯನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು, ಈ ನಮೂನೆಯನ್ನು ಹೊರತುಪಡಿಸಿ ಇತರೆ ಯಾವುದೇ ನಮೂನೆಗಳಲ್ಲಿ ಪಡೆಯಲಾದ ಅರ್ಹತಾ ಪ್ರಮಾಣ ಪತ್ರವನ್ನು ತಿರಸ್ಕರಿಸಲಾಗುವುದು.

## 11. ಗಮನಿಸಬೇಕಾದ ಮುಖ್ಯ ಅಂಶಗಳು:

11.1. ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸಿದ ಮಾತ್ರಕ್ಕೆ ಅಭ್ಯರ್ಥಿಯು ಆಯ್ಕೆಗೆ ಅರ್ಹತೆ ಪಡೆಯುವುದಿಲ್ಲ.

11.2. ಅಭ್ಯರ್ಥಿಗಳು ಅರ್ಜಿ ಹಾಕುವ ಮೊದಲು ದೇಹದಾರ್ಢ್ಯತೆಯ ಕುರಿತು ಸದರಿ ಹುದ್ದೆಗೆ ನಿಗದಿಪಡಿಸಿರುವ ಮಾನದಂಡವನ್ನು ಹೊಂದಿರುವ ಕುರಿತು ಖಚಿತಪಡಿಸಿಕೊಂಡು ಅರ್ಜಿಯನ್ನು ಸಲ್ಲಿಸುವುದು.

11.3. ಅಭ್ಯರ್ಥಿಗಳು ಆನ್‌ಲೈನ್ ಅರ್ಜಿಯ ಪ್ರತಿಯನ್ನು ಮತ್ತು ಶುಲ್ಕ ಪಾವತಿಸಿದ ರಶೀದಿಯನ್ನು ಮಾಹಿತಿಗಾಗಿ ತಮ್ಮೊಂದಿಗೆ ತಪ್ಪದೇ ಇಟ್ಟುಕೊಳ್ಳುವುದು.

11.4. ಅಭ್ಯರ್ಥಿಯು ಅರ್ಜಿಯನ್ನು ಭರ್ತಿ ಮಾಡುವಾಗ ಅಸ್ಪಷ್ಟ/ಅಪೂರ್ಣ/ತಪ್ಪು ಅಥವಾ ಸುಳ್ಳು ಮಾಹಿತಿ ನೀಡಬಾರದು. ಅಸ್ಪಷ್ಟ/ಅಪೂರ್ಣ/ತಪ್ಪು ಅಥವಾ ಸುಳ್ಳು ಮಾಹಿತಿ ನೀಡಿದ್ದಲ್ಲಿ ಅಭ್ಯರ್ಥಿಗಳೇ ಅದಕ್ಕೆ ನೇರ ಮತ್ತು ಸಂಪೂರ್ಣ ಜವಾಬ್ದಾರರಾಗುತ್ತಾರೆ. ಅಭ್ಯರ್ಥಿಗಳು ಆನ್‌ಲೈನ್ ಅರ್ಜಿಯಲ್ಲಿ ನೀಡಿರುವ ಮಾಹಿತಿ/ವಿವರಗಳನ್ನು ಯಾವುದೇ ಹಂತದಲ್ಲಿಯೂ ಬದಲಾವಣೆ ಮಾಡಲು ಅವಕಾಶ ನೀಡಲಾಗುವುದಿಲ್ಲ. ಆದುದರಿಂದ **ಅಭ್ಯರ್ಥಿಗಳು ಆನ್‌ಲೈನ್ ಅರ್ಜಿಯನ್ನು ಭರ್ತಿ ಮಾಡುವಾಗ ಈ ಕಚೇರಿಯ ಅಧಿಸೂಚನೆಯಲ್ಲಿ ತಿಳಿಸಿರುವ ಎಲ್ಲಾ ಅಂಶಗಳನ್ನು ಸರಿಯಾಗಿ ಓದಿ, ಅರ್ಥೈಸಿಕೊಂಡು, ಅರ್ಜಿಯನ್ನು ಸಮರ್ಪಕವಾಗಿ ಭರ್ತಿಮಾಡತಕ್ಕದ್ದು.**

11.5. ಅಭ್ಯರ್ಥಿಗಳು ತಮ್ಮ ಅರ್ಜಿಗಳಲ್ಲಿ ನೀಡಿರುವ ಮಾಹಿತಿಗಳು ಸರಿ ಇದೆ ಎಂದು ಭಾವಿಸಿ ಅವರುಗಳು ಮೂಲ ದಾಖಲೆಗಳ ಪರಿಶೀಲನೆ ಮತ್ತು ದೇಹದಾರ್ಢ್ಯತೆ, ದೈಹಿಕ ತಾಳ್ವಿಕೆ, ದೈಹಿಕ ಕಾರ್ಯಸಮರ್ಥತೆ ಮತ್ತು ಲಿಖಿತ ಪರೀಕ್ಷೆಯನ್ನು ಬರೆಯಲು ಅರ್ಹರೇ ಎಂಬುದನ್ನು ಪರಿಗಣಿಸಿ ಅರ್ಹರೆಂದು ಕಂಡುಬಂದ ಅಭ್ಯರ್ಥಿಗಳಿಗೆ ಮಾತ್ರ ಪ್ರವೇಶ ಪತ್ರಗಳನ್ನು ಜಾರಿ ಮಾಡಲಾಗುತ್ತದೆ. ಆದ್ದರಿಂದ ನಿಗದಿಪಡಿಸಿದ ವಯೋಮಿತಿ,

ವಿದ್ಯಾರ್ಹತೆ, ಮೀಸಲಾತಿ, ಇತ್ಯಾದಿಗಳಿಗೆ ಅನುಗುಣವಾಗಿ ಅರ್ಜಿಯಲ್ಲಿ ಕಡ್ಡಾಯವಾಗಿ ಸರಿಯಾದ ಮಾಹಿತಿ ನೀಡುವುದು ಅಭ್ಯರ್ಥಿಗಳ ನೇರ ಜವಾಬ್ದಾರಿಯಾಗಿರುತ್ತದೆ.

11.6. ಅರ್ಜಿ ಶುಲ್ಕವನ್ನು ಯಾವುದೇ ಕಾರಣಕ್ಕೂ ಮರು ಪಾವತಿಮಾಡಲಾಗುವುದಿಲ್ಲ.

11.7. ಒಬ್ಬನೇ ಅಭ್ಯರ್ಥಿಯು ಒಂದೇ ಹುದ್ದೆಗೆ ಒಂದಕ್ಕಿಂತ ಹೆಚ್ಚು ಅರ್ಜಿಗಳನ್ನು ಸಲ್ಲಿಸಿದ್ದಲ್ಲಿ **ಅಭ್ಯರ್ಥಿಯು ಸಲ್ಲಿಸಿರುವ ಕೊನೆಯ ಅರ್ಜಿಯನ್ನು ಮಾತ್ರ ಪರಿಗಣಿಸಲಾಗುವುದು. ಈ ವಿಷಯದಲ್ಲಿ ಆಯ್ಕೆ ಪ್ರಾಧಿಕಾರದ ತೀರ್ಮಾನವೇ ಅಂತಿಮವಾಗಿರುತ್ತದೆ.**

11.8. ಪ್ರಸ್ತುತ ಕೇಂದ್ರ/ರಾಜ್ಯ ಸರ್ಕಾರಿ ಸೇವೆಯಲ್ಲಿರುವ ಅಥವಾ ಸರ್ಕಾರಿ/ ಅರೆ ಸರ್ಕಾರಿ ಸಂಸ್ಥೆ/ಪ್ರಾಧಿಕಾರದಲ್ಲಿ ಸೇವೆ ಸಲ್ಲಿಸುತ್ತಿರುವ ಅಭ್ಯರ್ಥಿಗಳು **ಸಂಬಂಧಿಸಿದ ನೇಮಕಾತಿ ಪ್ರಾಧಿಕಾರದಿಂದ ಕಡ್ಡಾಯವಾಗಿ ಅನುಮತಿ ಪತ್ರವನ್ನು ಪಡೆದಿಟ್ಟುಕೊಂಡು ಅರಣ್ಯ ಇಲಾಖೆಯು ಅಪೇಕ್ಷಿಸಿದಾಗ ನೀಡತಕ್ಕದ್ದು.**

11.9. ಯಾವುದೇ ಅಭ್ಯರ್ಥಿಯು ತನ್ನ ಆಯ್ಕೆಗೆ ಸಂಬಂಧಿಸಿದಂತೆ ಬಾಹ್ಯ ಒತ್ತಡ ತಂದಲ್ಲಿ/ ತರಲು ಪ್ರಯತ್ನಿಸಿದಲ್ಲಿ ಅಂತಹ ಅಭ್ಯರ್ಥಿಯ ಅಭ್ಯರ್ಥಿತ್ವವನ್ನು ರದ್ದುಪಡಿಸಿ, ಮುಂದಿನ ಆಯ್ಕೆ ಪ್ರಕ್ರಿಯೆಯಿಂದ ಅನರ್ಹಗೊಳಿಸಲಾಗುವುದು.

11.10. ಯಾವುದೇ ಕೇಂದ್ರ/ರಾಜ್ಯ ಸರ್ಕಾರಿ ಇಲಾಖೆ ಅಥವಾ ಸರ್ಕಾರಿ/ ಅರೆ ಸರ್ಕಾರಿ ಸಂಸ್ಥೆ/ಪ್ರಾಧಿಕಾರದ ಸೇವೆಯಿಂದ ವಜಾಗೊಂಡಿರುವ ನೌಕರರು ನೇಮಕಾತಿಗೆ ಅರ್ಹರಾಗುವುದಿಲ್ಲ.

11.11. **ಕಾನೂನು ಬಾಹಿರವೆಂದು ಘೋಷಿಸಲಾದ** ಸಂಸ್ಥೆ ಸಂಘದ ಸದಸ್ಯರಾಗಿದ್ದರೆ ಅಥವಾ ಇನ್ನಾವುದೇ ರೀತಿಯಲ್ಲಿ ಅಂತಹ ಸಂಸ್ಥೆ ಸಂಘದೊಂದಿಗೆ ನಿಕಟ ಸಂಪರ್ಕ ಹೊಂದಿದ್ದರೆ ಅಂತಹ ವ್ಯಕ್ತಿ ನೇಮಕಾತಿಗೆ ಅರ್ಹರಾಗುವುದಿಲ್ಲ.

11.12. ಅಭ್ಯರ್ಥಿಯು ಸಮಾಜಘಾತುಕ ಕೃತ್ಯಗಳಲ್ಲಿ ತೊಡಗಿ ಅಪರಾಧಿಯಾಗಿದ್ದರೆ ಅಂತಹ ವ್ಯಕ್ತಿಗಳು ನೇಮಕಾತಿಗೆ ಅರ್ಹರಾಗುವುದಿಲ್ಲ.

11.13. ಒಬ್ಬರಿಗಿಂತ ಹೆಚ್ಚು ಜೀವಂತ ಪತ್ನಿಯರನ್ನು/ಪತಿಯರನ್ನು ಹೊಂದಿದ ಪುರುಷ/ಮಹಿಳೆ ಅಭ್ಯರ್ಥಿಗಳು ಸರ್ಕಾರದ ಪೂರ್ವಾನುಮತಿ ಇಲ್ಲದೇ ನೇಮಕಾತಿಗೆ ಅರ್ಹರಾಗಿರುವುದಿಲ್ಲ.

11.14. ಯಾವುದೇ ಅಭ್ಯರ್ಥಿಯು ಕೇಂದ್ರ/ರಾಜ್ಯ ಸರ್ಕಾರ **ಅಥವಾ** ಸರ್ಕಾರಿ ಸಂಸ್ಥೆಗಳು ನಡೆಸುವ ಯಾವುದೇ ಪರೀಕ್ಷೆಗಳಿಗೆ **ಅಥವಾ** ಆಯ್ಕೆಗಳಿಗೆ ಹಾಜರಾಗಲು ತಾತ್ಕಾಲಿಕವಾಗಿ/ಖಾಯಂ ಆಗಿ ಬಹಿಷ್ಕರಿಸಲ್ಪಟ್ಟಿದ್ದರೆ (Debarred) ಅಂತಹ ಅಭ್ಯರ್ಥಿಯು ಅರಣ್ಯ ಇಲಾಖೆಯ ಯಾವುದೇ ನೇಮಕಾತಿಗೆ ಅರ್ಹರಾಗಿರುವುದಿಲ್ಲ.

11.15. **ದುರ್ನಡತೆ:**
ಒಬ್ಬ ಅಭ್ಯರ್ಥಿಯು ನಕಲಿ ವ್ಯಕ್ತಿಯಾಗಿರುವನೆಂದು ಅಥವಾ ಖೋಟಾ ದಸ್ತಾವೇಜು **ಅಥವಾ** ತಿದ್ದಲಾದ ದಸ್ತಾವೇಜುಗಳನ್ನು ಸಲ್ಲಿಸಿರುವನೆಂದು **ಅಥವಾ** ತಪ್ಪು **ಅಥವಾ** ಸುಳ್ಳು ಹೇಳಿಕೆ ನೀಡಿರುವನೆಂದು **ಅಥವಾ** ವಾಸ್ತವಿಕ ಮಾಹಿತಿಯನ್ನು ಮರೆಮಾಚಿರುವನೆಂದು **ಅಥವಾ** ನೇಮಕಾತಿ ಉದ್ದೇಶಗಳಿಗಾಗಿ ಅನುಚಿತ ಮಾರ್ಗವನ್ನು ಅನುಸರಿಸುತ್ತಿರುವನೆಂದು **ಅಥವಾ** ಅನುಸರಿಸಲು ಪ್ರಯತ್ನಿಸಿರುವನೆಂದು **ಅಥವಾ** ಅವರ ನೇಮಕಾತಿಯ ಸಂಬಂಧದಲ್ಲಿ ಯಾವುದೇ ಇತರೆ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಬಿಸಿರುವನೆಂದು, ಕಂಡುಬಂದಲ್ಲಿ ಅವನು/ಅವಳು ಸ್ವತಃ ಕ್ರಿಮಿನಲ್ ವ್ಯಹರಣೆಗಳಿಗೆ ಮತ್ತು ಶಿಸ್ತು ಕ್ರಮಕ್ಕೆ ಒಳಪಡುವುದಲ್ಲದೆ ಹುದ್ದೆಯ ಆಯ್ಕೆಯಿಂದ ಅಭ್ಯರ್ಥಿತ್ವವನ್ನು ರದ್ದುಪಡಿಸಲಾಗುವುದು ಹಾಗೂ ಕರ್ನಾಟಕ ನಾಗರಿಕ ಸೇವೆಗಳು (ಸಾಮಾನ್ಯ ನೇಮಕಾತಿ) ನಿಯಮಗಳು, 1977ರ ಉಪ ನಿಯಮ 20ರಂತೆ ಅಪರಾಧಿ ವ್ಯವಹರಣೆಗೆ ಒಳಪಡುವರು.

11.16. ಸರ್ಕಾರಿ ಆದೇಶ ಸಂಖ್ಯೆ: ಎಫ್‌ಡಿ ಎಸ್‌ಪಿಎಲ್ 04 ಪಿಇಟಿ 2005 ದಿನಾಂಕ 31.03.2006ರಂತೆ ಅಂಶದಾಯಿ ನಿವೃತ್ತಿ ಯೋಜನೆ (Contributory Pension Scheme) ವ್ಯಾಪ್ತಿಗೆ ಈ ನೇಮಕಾತಿಯಲ್ಲಿ ಆಯ್ಕೆಯಾದ ಅಭ್ಯರ್ಥಿಗಳು ಬದ್ಧರಾಗಿರುತ್ತಾರೆ.

11.17. ನೇಮಕಾತಿ ಪ್ರಕ್ರಿಯೆಯ ಯಾವುದೇ ಹಂತದಲ್ಲಿ ಆಯ್ಕೆಗೆ ಪರಿಗಣಿಸಿರುವ ಅಂಶಗಳ ಬಗ್ಗೆ ವ್ಯತ್ಯಾಸ ಕಂಡು ಬಂದಲ್ಲಿ ಅಥವಾ ಆಕ್ಷೇಪಣೆ ಸಲ್ಲಿಕೆಯಾದಲ್ಲಿ, ನ್ಯಾಯಾಲಯ ತೀರ್ಪುಗಳು, ಸರಕಾರದ ನಿರ್ದೇಶನ/ಸುತ್ತೋಲೆಗಳು ಬಂದಲ್ಲಿ, ಪ್ರಕಟಿಸಿರುವ ಆಯ್ಕೆಪಟ್ಟಿಯಲ್ಲಿ ಸೂಕ್ತ ಬದಲಾವಣೆ ಮಾಡಿ ಆಯ್ಕೆಪಟ್ಟಿ ಪರಿಷ್ಕರಿಸುವ ಸಂಪೂರ್ಣ ಅಧಿಕಾರವನ್ನುಆಯ್ಕೆಪ್ರಾಧಿಕಾರವುಹೊಂದಿರುತ್ತದೆ.

11.18. ಒಂದು ವೇಳೆ ಅಧಿಸೂಚನೆಯಲ್ಲಿ ನಮೂದಿಸಿರುವ ಹುದ್ದೆಗಳ ಸಂಖ್ಯೆಯಲ್ಲಿ ಕಡಿತ ಅಥವಾ ಹೆಚ್ಚುವರಿ ಆದಲ್ಲಿ ಮತ್ತು ಮೀಸಲಾತಿ ವರ್ಗೀಕರಣದಲ್ಲಿ ಏನಾದರೂ ಬದಲಾವಣೆ ಮಾಡಬೇಕಾದ ಅವಶ್ಯಕತೆ ಕಂಡುಬಂದಲ್ಲಿ ಬದಲಾವಣೆ ಮಾಡಲಾಗುವುದು ಮತ್ತು ಬದಲಾದ ವಿವರಗಳ ಮಾಹಿತಿಯನ್ನು ಕರ್ನಾಟಕ ಅರಣ್ಯ ಇಲಾಖಾ ವೆಬ್‌ಸೈಟ್: **https://aranya.gov.in/** ನಲ್ಲಿ ಮುಖ ಪುಟದ ಕೆಳ ಭಾಗದಲ್ಲಿ **"ನೇಮಕಾತಿ"** ಶೀರ್ಷಿಕೆಯ ಮೂಲಕ ಪ್ರಕಟಪಡಿಸಲಾಗುವುದು.

11.19. ಅಭ್ಯರ್ಥಿಯು ವಲಯ ಅರಣ್ಯಾಧಿಕಾರಿ ವೃಂದದ ಹುದ್ದೆಗೆ ಅರ್ಜಿ ಸಲ್ಲಿಸಿದ ತಕ್ಷಣ ತಾನು, ಸರ್ಕಾರದ ಎಲ್ಲಾ ಕಾಯ್ದೆ, ನಿಯಮ ಮತ್ತು ಅಧಿನಿಯಮಗಳಿಗೆ (Acts / Rules & Regulations) ಬದ್ಧನಾಗಿರುತ್ತಾನೆ ಎಂದು ಭಾವಿಸಲಾಗಿರುತ್ತದೆ. ಒಂದು ವೇಳೆ ತಾನು ಸದರಿ ಹುದ್ದೆಗೆ ಆಯ್ಕೆಯಾಗದ ಪಕ್ಷದಲ್ಲಿ ತದನಂತರ ಅದೇ ನಿಯಮಗಳನ್ನು ಪ್ರಶ್ನಿಸಲು ಅವಕಾಶವಿರುವುದಿಲ್ಲ.

11.20. ನೇರ ನೇಮಕಾತಿ ಆಯ್ಕೆ ಪ್ರಕ್ರಿಯೆಯ ವಿಷಯದಲ್ಲಿ ಇಲಾಖೆಯೊಂದಿಗೆ ಯಾವುದೇ ಪತ್ರ ವ್ಯವಹಾರಕ್ಕೆ ಆಸ್ಪದವಿರುವುದಿಲ್ಲ.

11.21. **ಅಭ್ಯರ್ಥಿಯು ಆನ್ ಲೈನ್ ಅರ್ಜಿ ಸಲ್ಲಿಸುವ ಸಂದರ್ಭದಲ್ಲಿ ನೀಡಿದ ಮೊಬೈಲ್ ಸಂಖ್ಯೆ ಮತ್ತು ಇ-ಮೇಲ್ ಐಡಿಯನ್ನು ನೇಮಕಾತಿ ಪ್ರಕ್ರಿಯೆ ಪೂರ್ಣಗೊಳ್ಳುವವರೆಗೆ ಚಾಲನೆಯಲ್ಲಿರುವಂತೆ ನಿಗಾವಹಿಸತಕ್ಕದ್ದು.**

11.22. ಅಭ್ಯರ್ಥಿಯ ಆಯ್ಕೆ ಪ್ರಕ್ರಿಯೆಗೆ ಸಂಬಂಧಿಸಿದಂತೆ ಯಾವುದೇ ಸ್ಪಷ್ಟೀಕರಣಕ್ಕೆ ಆಯ್ಕೆ ಪ್ರಾಧಿಕಾರದ ತೀರ್ಮಾನವೇ ಅಂತಿಮವಾಗಿರುತ್ತದೆ. ಎಲ್ಲಾ ಕಾನೂನು ವಿವಾದಗಳು ಕರ್ನಾಟಕ ರಾಜ್ಯ ಆಡಳಿತ ನ್ಯಾಯ ಮಂಡಳಿಯ ವ್ಯಾಪ್ತಿಗೆ ಒಳಪಟ್ಟಿರುತ್ತದೆ.

ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ
(ಅರಣ್ಯ ಪಡೆ ಮುಖ್ಯಸ್ಥರು) ಹಾಗೂ
ಆಯ್ಕೆ ಪ್ರಾಧಿಕಾರ